ಸಂಪುಟ : 9 ಸಂಚಿಕೆ 40 ಪುಟ : 4 ಬೆಲೆ: 3.00 ಮಂಗಳವಾರ ಮಾರ್ಚ್ 12 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ


ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 40 Pages : 4 Price : 3.00 Tuesday March 12 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಚಿವ ಎಚ್.ಕೆ. ಪಾಟೀಲರ ಇಂದಿನ ಪ್ರವಾಸದ ವಿವರ



**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಕಾನೂನು, ಪ್ರವಾಸೋದ್ಯಮ, ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ಅವರ ಮಾ.12ರ ಪ್ರವಾಸದ ಕಾರ್ಯಕ್ರಮಗಳ ವಿವರ ಹೀಗಿದೆ.

ಮಾ.11ರ ರಾತ್ರಿ 11 ಗಂಟೆಗೆ ರೈಲಿನ ಮೂಲಕ ಬೆಂಗಳೂರಿನಿಂದ ಹುಬ್ಬಳ್ಳಿಗೆ ಆಗಮಿಸುವ ಸಚಿವರು ಮಾ.12ರ ಮುಂಜಾನೆ 6 ಗಂಟೆಗೆ ಹುಬ್ಬಳ್ಳಿ ತಲುಪಲಿದ್ದು, ಹುಬ್ಬಳ್ಳಿಯಿಂದ ರಸ್ತೆ ಮೂಲಕ ಗದುಗಿಗೆ ಪ್ರಯಾಣ ಬೆಳೆಸಿ, 7.30ಕ್ಕೆ ಗದಗ ತಲುಪುವರು.

ಬೆಳಿಗ್ಗೆ 8.30ಕ್ಕೆ ಹುಲಕೋಟಿಯ ರೂರಲ್ ಮೆಡಿಕಲ್ ಸೊಸೈಟಿಯ ಆಸ್ಪತ್ರೆಗೆ ಕುಡಿಯುವ ನೀರಿನ ಕಾಮಗಾರಿಯ ಭೂಮಿಪೂಜೆ ನೆರವೇರಿಸುವರು. 9 ಗಂಟೆಗೆ ಬೆಟಗೇರಿಯ ಸರ್ಕಾರಿ ಐಟಿಐ ಕಾಲೇಜಿನ ನಾಮಕರಣ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. 9.30ಕ್ಕೆ ಗದುಗಿನ ಭೀಷ್ಮಕೆರೆ ಆವರಣದಲ್ಲಿ ಭಿಷ್ಮಕೆರೆ ಅಭಿವೃದ್ಧಿ ಕಾಮಗಾರಿಗಳ ಭೂಮಿಪೂಜೆ ನೆರವೇರಿಸುವರು.

ಬೆಳಿಗ್ಗೆ 10 ಗಂಟೆಗೆ ನಾಗಾವಿಯ ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯದಲ್ಲಿ 'ಗಾಂಧಿ-ಅದಮ್ಯ ಚೇತನ: ಜೀವನ ಸಂದೇಶ ಹಾಗೂ ಗದಗ ಜಿಲ್ಲೆಯಲ್ಲಿ ಸ್ವಾತಂತ್ರ್ಯ ಹೋರಾಟ' ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಪಾಲ್ಗೊಳ್ಳುವರು.

11 ಗಂಟೆಗೆ ಮುಂಡರಗಿ ತಾಲೂಕು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶದಲ್ಲಿ ಪಾಲ್ಗೊಂಡು 12.30ಕ್ಕೆ ಡಂಬಳದಿಂದ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ತಿಳಿಸಿದ್ದಾರೆ.

## ಸಹಕಾರ ಸಂಘಗಳ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ. ಹೊಂಬಳ, ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿ, ಸೊರಟೂರ, ಭುವನೇಶ್ವರಿ ನೇಕಾರರ ಜವಳಿ ಉತ್ಪಾದಕರ ಸಹಕಾರ ಸಂಘ ನಿ, ಬೆಟಗೇರಿ-ಗದಗ, ವಿಜಯಲಕ್ಷ್ಮೀ ಮಹಿಳಾ ವಿವಿದೋದ್ದೇಶಗಳ ಸಹಕಾರ ಸಂಘ ನಿ, ಹರ್ತಿ, ಕೊಣ್ಣೂರ ಶಿರೋಳ ಅನುದಾನಿತ ಪ್ರೌಡಶಾಲಾ ಶಿಕ್ಷಣ ಸಂಸ್ಥೆಗಳ ನೌಕರರ ಪತ್ತಿನ ಸಹಕಾರ ಸಂಘ ನಿ, ವರ್ಧಮಾನ ಅಲ್ಪಸಂಖ್ಯಾತರ ಪತ್ತಿನ ಸಹಕಾರ ಸಂಘ ನಿ, ಗಜೇಂದ್ರಗಡ, ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿ, ಬೆಳವಣಿಕಿ, ಕಲ್ಪವೃಕ್ಷ ಮಹಿಳಾ ವಿವಿದೋದ್ದೇಶಗಳ ಸಹಕಾರ ಸಂಘ ನಿ, ರೋಣ, ಗದಗದ ದೈವಜ್ಞ ಕ್ರಿಯಾ ಸಮಿತಿ ವಿವಿದೋದ್ದೇಶಗಳ ಸಹಕಾರ ಸಂಘ ನಿ, ಗದಗ ಅಯ್ಯಪ್ಪ ಸ್ವಾಮಿ ವಿವಿದೋದ್ದೇಶಗಳ ಸಹಕಾರ ಸಂಘ ನಿ, ಬನಶಂಕರಿ ಮಹಿಳಾ ವಿವಿದೋದ್ದೇಶಗಳ ಸಹಕಾರ ಸಂಘ ನಿ, ಬೆಟಗೇರಿ, ಅನ್ನಪೂರ್ಣೇಶ್ವರಿ ಮಹಿಳಾ ವಿವಿದೋದ್ದೇಶಗಳ ಸಹಕಾರ ಸಂಘ ನಿ, ಮಲ್ಲಸಮುದ್ರ ಈ ಸಹಕಾರ ಸಂಘಗಳ ಕಾರ್ಯಾಚರಣೆಯನ್ನು ನಡೆಸದೇ ಸಂಪೂರ್ಣವಾಗಿ ಸ್ಥಗಿತಗೊಂಡಿವೆ.

ಸುಮಾರು 3 ವರ್ಷಕ್ಕಿಂತ ಮೇಲ್ಪಟ್ಟು ಲೆಕ್ಕಪರಿಶೋಧನೆಯಾಗಿಲ್ಲ. ನಿಗದಿತ ಅವಧಿಯಲ್ಲಿ ಚುನಾವಣೆ ಜರುಗಿಲ್ಲ. ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಪ್ರಕಾರ ವಾರ್ಷಿಕ ಮಹಾಸಭೆಯನ್ನು ಜರುಗಿಸಿಲ್ಲ. ಅಲ್ಲದೆ, ಆಡಳಿತ ಮಂಡಳಿ ಸದಸ್ಯರು ಹಾಗೂ ಸಾಮಾನ್ಯ ಸದಸ್ಯರು ಕಾರ್ಯ ಚಟುವಟಿಕೆಗಳಿಗೆ ಆಸಕ್ತಿ ತೋರಿಸದೇ ಇರುವುದು ಕಂಡು ಬಂದಿದ್ದು, ಅಥಾವೆ ಪತ್ರಿಕೆಗಳು ಲಭ್ಯವಿರುವುದಿಲ್ಲ. ಆಡಳಿತ ಮಂಡಳಿ ಸದಸ್ಯರ ವಿಳಾಸವು ಲಭ್ಯವಿಲ್ಲದ್ದರಿಂದ, ಸಹಕಾರ ಸಂಘಗಳಿಗೆ ಸಂಬಂಧಪಟ್ಟವರು ಕಚೇರಿ ವೇಳೆಯಲ್ಲಿ ಸಹಕಾರ ಸಂಘಗಳ ಉಪನಿಬಂಧಕರು, ಗದಗ ಜಿಲ್ಲೆ, ಗದಗ, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ-125, ಗದಗ ಇವರನ್ನು ಭೇಟಿ ಮಾಡಬಹುದಾಗಿದೆ.

ಈ ಪತ್ರಿಕಾ ಪ್ರಕಟಣೆ ಹೊರಡಿಸಿದ 15 ದಿನಗಳೊಳಗಾಗಿ ಸಂಬಂಧಪಟ್ಟವರು ಬಾರದೇ ಹೋದಲ್ಲಿ ಸದರಿ ಸಹಕಾರ ಸಂಘಗಳನ್ನು ಸಮಾಪನೆ ಮಾಡಲು ಕ್ರಮ ವಹಿಸಲಾಗುವುದು. ಮುಂದೆ ಬರುವ ಯಾವುದೇ ಹೊಣೆಗಾರಿಕೆಗಳಿಗೆ ಸಮಾಪನಾಧಿಕಾರಿಗಳು ಹೊಣೆಗಾರರಾಗಿರುವುದಿಲ್ಲವೆಂದು ಜಿಲ್ಲೆಯ ಸಹಕಾರ ಸಂಘಗಳ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಿರಹಟ್ಟಿ, ಲಕ್ಷ್ಮೇಶ್ವರ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ಇಂದು

# ಗ್ಯಾರಂಟಿ ಸಮಾವೇಶಕ್ಕೆ ವೇದಿಕೆ ಸಜ್ಜು



ಮಾ.12ರಂದು ನಡೆಯುವ ಈ ಸಮಾವೇಶಕ್ಕೆ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳ ಅಂದಾಜು 8-10 ಸಾವಿರ ಫಲಾನುಭವಿಗಳು ಸೇರಲಿದ್ದು, ಈ ಹಿನ್ನೆಲೆಯಲ್ಲಿ ಕಾರ್ಯಕ್ರಮಕ್ಕೆ ಗ್ರಾಮೀಣ ಪ್ರದೇಶಗಳಿಂದ ಬರುವ ಜನರಿಗೆ ವಾಹನ ವ್ಯವಸ್ಥೆ ಮತ್ತು ಸ್ಥಳದಲ್ಲಿ ಊಟ ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಮಾಡಲಾಗಿದೆ. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಭದ್ರತೆ ದೃಷ್ಟಿಯಿಂದ ಪಾರ್ಕಿಂಗ್ ವ್ಯವಸ್ಥೆ ಸೇರಿದಂತೆ ಯಾವುದೇ ಸಮಸ್ಯೆಯಾಗದಂತೆ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ತಹಸೀಲ್ದಾರ ವಾಸುದೇವ ಎಂ.ಸ್ವಾಮಿ ಹೇಳಿದರು.

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ಕಾರ್ಯಕ್ರಮ ಮಾ.12ರಂದು ಮಧ್ಯಾಹ್ನ 3 ಗಂಟೆಗೆ ಪಟ್ಟಣದ ಉಮಾ ಮಹಾವಿದ್ಯಾಲಯ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದು, ಈ ಕುರಿತಂತೆ ವಿವಿಧ ಇಲಾಖೆಗಳ ಅಧಿಕಾರಿಗಳ ತಂಡ ಸೋಮವಾರ ಕಾರ್ಯಕ್ರಮದ ಸ್ಥಳದಲ್ಲಿ ಹಾಜರಿದ್ದು ವ್ಯವಸ್ಥೆಗಳ ಪರಿಶೀಲನೆ ನಡೆಸಿದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಸಚಿವರಾದ ಕೆ.ಎಚ್. ಮುನಿಯಪ್ಪ, ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ, ಇಂಧನ ಸಚಿವ ಕೆ.ಜೆ. ಜಾರ್ಜ್, ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣಪ್ರಕಾಶ ರುದ್ರಪ್ಪ ಪಾಟೀಲ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಸರ್ಕಾರಿ ಮುಖ್ಯ ಸಚೇತಕ ಹಾಗೂ ವಿ.ಪ ಸದಸ್ಯ ಸಲೀಂ ಅಹ್ಮದ್, ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ. ಗದ್ದಿಗೌಡರ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಲಕ್ಷ್ಮೇಶ್ವರ ತಾ.ಪಂ ಯೋಜನಾ ನಿರ್ದೇಶಕ ಹಾಗೂ ಆಡಳಿತಾಧಿಕಾರಿ ಜಗದೇವ ಬಿ, ಶಿರಹಟ್ಟಿ ತಾ.ಪಂ ಆಡಳಿತಾಧಿಕಾರಿ ಹಾಗೂ ಜಿ.ಪಂ ಮುಖ್ಯಯೋಜನಾಧಿಕಾರಿ ಎನ್.ಕೆ. ನಿರ್ಮಲಾ, ಲಕ್ಷ್ಮೇಶ್ವರ ಪುರಸಭೆ ಆಡಳಿತಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ್ ಆಗಮಿಸುವರು.

ಲಕ್ಷ್ಮೇಶ್ವರ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ, ತಹಸೀಲ್ದಾರ ವಾಸುದೇವ ಸ್ವಾಮಿ, ಶಿರಹಟ್ಟಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ನಿಂಗಪ್ಪ ಓಲೇಕಾರ, ಶಿರಹಟ್ಟಿ ತಹಸೀಲ್ದಾರ ಹಾಗೂ ಪ.ಪಂ ಆಡಳಿತಾಧಿಕಾರಿ ಅನಿಲ ಬಡಿಗೇರ, ಶಿರಹಟ್ಟಿ ಆರಕ್ಷಕ ವೃತ್ತ ನಿರೀಕ್ಷಕ ನಾಗರಾಜ ಮಾಡಳ್ಳಿ, ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಶಿರಹಟ್ಟಿ ಪ.ಪಂ ಮುಖ್ಯಾಧಿಕಾರಿ ಸಿದ್ಧರಾಯ ಕಟ್ಟಿಮನಿ ಸರ್ವರಿಗೂ ಸ್ವಾಗತ ಕೋರಿದ್ದಾರೆ.



### ಪೊಲೀಸ್ ಇಲಾಖೆಯ 'ಥರ್ಡ್ ಐ' ಕಾರ್ಯಾಚರಣೆ ಉದ್ಘಾಟಿಸಿದ ಶಾಸಕ ಜಿ.ಎಸ್. ಪಾಟೀಲ

# ಸಂಚಾರ ನಿಯಮಗಳನ್ನು ತಪ್ಪದೇ ಪಾಲಿಸಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ವಾಹನ ಸವಾರರು ಸಂಚಾರ ನಿಯಮಗಳನ್ನು ಪಾಲಿಸಬೇಕು. ಇದರಿಂದ ಸವಾರರು ಅಪಘಾತಗಳಿಂದ, ಜೀವ ಹಾನಿಯಾಗುವದರಿಂದ ಸುರಕ್ಷಿತವಾಗಿರಬಹುದು ಎಂದು ರೋಣ ಶಾಸಕ, ಕರ್ನಾಟಕ ರಾಜ್ಯ ಖನಿಜ ನಿಗಮದ ಅಧ್ಯಕ್ಷ ಹಾಗೂ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಜಿ.ಎಸ್. ಪಾಟೀಲ ಹೇಳಿದರು.

ಪಟ್ಟಣದ ದುರ್ಗಾ ವೃತ್ತದಲ್ಲಿ ಪೊಲೀಸ್ ಇಲಾಖೆ ಅಳವಡಿಸಿರುವ 'ಥರ್ಡ್ ಐ' ಕಾರ್ಯಾಚರಣೆಗೆ ಸೋಮವಾರ ಚಾಲನೆ ನೀಡಿ ಅವರು ಮಾತನಾಡಿದರು.

ಇಂದಿನ ದಿನಗಳಲ್ಲಿ ಸಂಚಾರ ನಿಯಮಗಳನ್ನು ಉಲ್ಲಂಘಿಸುವುದು ಸರ್ವೇ ಸಾಮಾನ್ಯವಾಗಿದೆ. ಎಷ್ಟೇ ಜನ ಪೊಲೀಸರಿದ್ದರೂ ನಿಯಮ ಉಲ್ಲಂಘಿಸುವ ಸವಾರರು ಅವರ ಕಣ್ತಪ್ಪಿಸಿ ಓಡಾಡುವುದನ್ನು ಕಾಣುತ್ತೇವೆ. ಈ ಕ್ಯಾಮೆರಾದಿಂದ ಅಂತಹ ಸವಾರರನ್ನು ಪತ್ತೆ ಹಚ್ಚಲು ಸಹಕಾರಿಯಾಗುತ್ತದೆ. ಅಲ್ಲದೆ ಇದು ಅನೇಕ ಅಪರಾಧಗಳ, ಅಪರಾಧಿಗಳ ಪತ್ತೆಗೂ ಸಹಾಯ ಮಾಡುತ್ತದೆ. ವಾಹನ ಸವಾರರು ಇನ್ನು ಮುಂದೆ ಪಟ್ಟಣದಲ್ಲಿ ಬೇಕಾಬಿಟ್ಟಿಯಾಗಿ ಓಡಾಡದೆ ದ್ವಿಚಕ್ರ ವಾಹನ ಸವಾರರು ಹೆಲ್ಮೆಟ್ ಹಾಕಿಕೊಂಡು,



ಕಾರ್ ಚಾಲಕರು ಸೀಟ್ ಬೆಲ್ಟ್‌ಗಳನ್ನು ಹಾಕಿಕೊಂಡು ಓಡಾಡಬೇಕು. ಇದರಿಂದ ನಿಮ್ಮ ಕುಟುಂಬದವರು ನೆಮ್ಮದಿಯಿಂದ ಇರಲು ಸಹಾಯಕವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಂಕರಗೌಡ ಪಾಟೀಲ, ಅಂದಾನಗೌಡ ಮಲ್ಲನಗೌಡ್ರ, ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಶಿವನಗೌಡ ಪಾಟೀಲ, ನಿಂಗನಗೌಡ ಲಕ್ಕನಗೌಡ್ರ, ಬಾಳಪ್ಪ ಸೋಮಗೊಂಡ, ಕಳಕನಗೌಡ ಪಾಟೀಲ, ನಿವೃತ್ತ ಶಿಕ್ಷಕ ಎ.ಎ. ನವಲಗುಂದ, ಅಲ್ಲಾಭಕ್ಷಿ ನದಾಫ್, ಶೇಕಪ್ಪ ಕೆಂಗಾರ, ಶೇಕಪ್ಪ ಜುಟ್ಲ, ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ಸೇರಿದಂತೆ ನೂರಾರು ನಾಗರಿಕರು, ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

ಗದಗ ಜಿಲ್ಲಾ ಪೊಲೀಸ್ ಅಧೀಕ್ಷಕ ಬಿ.ಎಸ್. ನೇಮಗೌಡ ಮಾತನಾಡಿ, ಅನಗತ್ಯವಾಗಿ ಶಿಕ್ಷಿಸಲು ಈ ಕ್ಯಾಮೆರಾವನ್ನು ಅಳವಡಿಸಿಲ್ಲ. ವಾಹನವೆಂದ ಮೇಲೆ ಅಪಘಾತಗಳು ಸರ್ವೇ ಸಾಮಾನ್ಯ. ಈ ಅಪಘಾತಗಳು ಹೇಗಾಯಿತು, ಯಾರು ಮಾಡಿದರು ಎಂಬುದನ್ನು ತಿಳಿಯುವುದಕ್ಕಾಗಿ, ಅಪರಾಧಿಗಳನ್ನು ಪತ್ತೆ ಹಚ್ಚುವುದಕ್ಕಾಗಿ ಕ್ಯಾಮೆರಾವನ್ನು ಅಳವಡಿಸಲಾಗಿದೆ. ಇದಕ್ಕಾಗಿ ಯಾರೂ ಭಯ ಪಡಬೇಕಿಲ್ಲ. ಹಾಗೆಂದು ವಾಹನ ಸವಾರರು ಹೆಲ್ಮೆಟ್ ಇಲ್ಲದೆ ಓಡಾಡಿದರೆ, ಸೀಟ್ ಬೆಲ್ಟ್ ಇಲ್ಲದೆ ಕಾರ್ ಚಾಲನೆ ಮಾಡಿದರೆ ದಂಡ ತೆರಬೇಕಾಗುತ್ತದೆ. ನಿಮ್ಮ ಅನುಕೂಲಕ್ಕಾಗಿ ಸಾರಿಗೆ ಇಲಾಖೆ ಮತ್ತು ಪೊಲೀಸ್ ಇಲಾಖೆಗಳು ಜಂಟಿಯಾಗಿ ಮಾಡಿರುವ ಈ ಹೊಸ ವ್ಯವಸ್ಥೆಗೆ ನೀವೆಲ್ಲರೂ ಹೊಂದಿಕೊಳ್ಳಬೇಕೆಂದು ತಿಳಿಸಿದರು.

### ಗಜೇಂದ್ರಗಡದಲ್ಲಿ 'ಥರ್ಡ್ ಐ' ಸಿಸಿ ಕ್ಯಾಮರಾ ಕಾರ್ಯಾಚರಣೆ ಉದ್ಘಾಟಿಸಿದ ಶಾಸಕ ಜಿ.ಎಸ್. ಪಾಟೀಲ

# ಕಾನೂನು ಪಾಲನೆಯಲ್ಲಿಯೂ ಆಸಕ್ತಿ ವಹಿಸಿ

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಬೆಂಗಳೂರು ನಂತರ ಗದಗ ಜಿಲ್ಲೆ ಸೇರಿ ಪಟ್ಟಣದಲ್ಲಿ 'ಥರ್ಡ್ ಐ' ಸಿಸಿ ಕ್ಯಾಮರಾ ಅಳವಡಿಸಲಾಗಿದ್ದು, ಸಾರ್ವಜನಿಕರು ಸಂಚಾರ ನಿಯಮಗಳನ್ನು ಪಾಲಿಸಲು ಮುಂದಾಗಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ ಅಡಿಯಲ್ಲಿ ಸೋಮವಾರ ಇಲ್ಲಿನ ಕಾಲಕಾಲೇಶ್ವರ ವೃತ್ತದಲ್ಲಿ 'ಥರ್ಡ್ ಐ' ಸಿಸಿ ಕ್ಯಾಮರಾಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸರ್ಕಾರಗಳು ಜಾರಿಗೆ ತರುವ ಪ್ರತಿ ಕಾನೂನು ಹಾಗೂ ಯೋಜನೆಗಳಲ್ಲಿ ಜನರ ಸುರಕ್ಷತೆ ಜತೆಗೆ ಅಭಿವೃದ್ಧಿಯನ್ನು ಬಯಸುತ್ತವೆ. ಹೀಗಾಗಿ ಜನತೆ ಯೋಜನೆಗಳ ಲಾಭವನ್ನು ಪಡೆಯಲು ತೋರುವ ಹಿತಾಸಕ್ತಿಯನ್ನು ಕಾನೂನು ಪಾಲನೆಯಲ್ಲಿಯೂ ತೋರಬೇಕು. ಸಂಚಾರ ನಿಯಮಗಳು ವಾಹನ ಸಾವರರ ಹಿತವನ್ನು ಕಾಪಾಡುವುದರೊಂದಿಗೆ ಪಾದಾಚಾರಿಗಳ ಜೀವ ರಕ್ಷಣೆಗೂ ಸಹಕಾರಿಯಾಗಿರುತ್ತವೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಡಿವೈಎಸ್‌ಪಿ ಪ್ರಭುಗೌಡ ಕಿರೇದಳ್ಳಿ, ತಹಸೀಲ್ದಾರ್ ಕಿರಣಕುಮಾರ ಕುಲಕರ್ಣಿ, ಸಿಪಿಐ ಎಸ್.ಎಸ್. ಬೀಳಗಿ, ಪುರಸಭೆ ಸದಸ್ಯರಾದ ಶಿವರಾಜ ಘೋರ್ಪಡೆ, ರಾಜು ಸಾಂಗ್ಲೀಕರ, ಮುರ್ತುಜಾ ಡಾಲಾಯತ್, ವೆಂಕಟೇಶ ಮುದಗಲ್, ಉಮೇಶ ರಾಠೋಡ, ಅಶೋಕ ಬಾಗಮಾರ, ಸಿದ್ದಣ್ಣ ಬಂಡಿ, ಎಚ್.ಎಸ್. ಸೋಂಪುರ, ಎ.ಡಿ. ಕೋಲಕಾರ, ಶ್ರೀಧರ ಬಿದರಳ್ಳಿ, ಅರಿಹಂತ ಬಾಗಮಾರ, ಶರಣಪ್ಪ ಚಳಗೇರಿ, ಪಿಎಸ್‌ಐ ಸೋಮನಗೌಡ ಗೌಡ್ರ, ಉಮೇಶ ಲಮಾಣಿ, ರಾಘವೇಂದ್ರ ಮುಂತಾದವರಿದ್ದರು.



ವಾಹನ ಚಾಲನೆ ಮಾಡುವ ಸಂದರ್ಭದಲ್ಲಿ ಮೊಬೈಲ್ ಬಳಕೆ, ಹೆಲ್ಮೆಟ್ ಧರಿಸುವುದು ಹಾಗೂ ಬೆಲ್ಟ್ ಹಾಕಿಕೊಳ್ಳುವುದು ಜೀವ ರಕ್ಷಣೆಗೆ ಸಹಾಯಕವಾಗಿದೆ. ಜನತೆ ಕಾನೂನುಗಳನ್ನು ಪಾಲನೆ ಮಾಡುವ ಮೂಲಕ ಸುಗಮ ಸಂಚಾರಕ್ಕೆ ಆದ್ಯತೆ ನೀಡಬೇಕು ಎಂದ ಶಾಸಕ ಜಿ.ಎಸ್. ಪಾಟೀಲ, ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಪ್ರತಿ ಕುಟುಂಬವನ್ನು ತಲುಪಿದ್ದು, ಜನತೆ ಕಾಂಗ್ರೆಸ್ ಆಡಳಿತವನ್ನು ಮೆಚ್ಚಿಕೊಂಡಿದ್ದಾರೆ. ಪರಿಣಾಮ, ಜನರ ವಿಶ್ವಾಸಗಳಿಸಿರುವ ಕಾಂಗ್ರೆಸ್‌ನ ಜನಪ್ರಿಯತೆ ಸಹಿಸಿಕೊಳ್ಳದ ವಿಪಕ್ಷಗಳು ಸಿಎಂ ಸಿದ್ದರಾಮಯ್ಯ ಸೇರಿ ರಾಜ್ಯ ಕಾಂಗ್ರೆಸ್ ಸರ್ಕಾರದ ಮೇಲೆ ಸುಳ್ಳು ಆರೋಪಗಳನ್ನು ಮಾಡುತ್ತಿರುವುದು ವಿಪರ್ಯಾಸ ಎಂದರು.

# ಸಾರ್ವಜನಿಕರು ಪೊಲೀಸ್‌ರೊಂದಿಗೆ ಸಹಕರಿಸಿ

**■ವಿಜಯಸಾಕ್ಷಿ ಸುದ್ದಿ, ರೋಣ**

ರೋಣ ಪಟ್ಟಣದ ಮುಖ್ಯ ವೃತ್ತಗಳಲ್ಲಿ 'ಥರ್ಡ್ ಐ' ಸಿಸಿ ಟಿವಿ ಕ್ಯಾಮರಗಾಳನ್ನು ಅಳವಡಿಸಿದ್ದು, ಸಾರ್ವಜನಿಕರು ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಸೋಮವಾರ ಪಟ್ಟಣದ ಪಿಡಬ್ಲುಡಿ ಪ್ರವಾಸಿ ಮಂದಿರದ ಬಳಿ 'ಥರ್ಡ್ ಐ' ಸಿಸಿ ಟಿವಿ ಕ್ಯಾಮರಾ ಅಳವಡಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ದ್ವಿಚಕ್ರ ವಾಹನ ಸವಾರರು ತಮ್ಮ ಹಾಗೂ ಕುಟುಂಬದ ಸುರಕ್ಷತೆಯ ದೃಷ್ಟಿಯಿಂದ ಹೆಲ್ಮೆಟ್ ಧರಿಸಿ ವಾಹನ ಚಲಾಯಿಸಬೇಕು. ಕಾರ್‌ನಲ್ಲಿ ಪ್ರಯಾಣಿಸುವವರು ಸೀಟ್ ಬೆಲ್ಟ್ ಹಾಕಿಕೊಳ್ಳಬೇಕು. ಇದರಿಂದ ಅಪಘಾತ ಸಂಖ್ಯೆಗಳು ಕಡಿಮೆಯಾಗುವುದಲ್ಲದೆ, ನಿಮ್ಮನ್ನೇ ನಂಬಿಕೊಂಡಿರುವ ಕುಟುಂಬ ನೆಮ್ಮದಿಯಾಗಿರುತ್ತವೆ ಎಂದ ಶಾಸಕರು, ಕ್ಯಾಮರಾ ಅಳವಡಿಕೆಗೆ 10 ಲಕ್ಷ ರೂ. ಅನುದಾನ ಒದಗಿಸಲಾಗಿದೆ ಎಂದರು.



ಎಸ್ಪಿ ಬಿ.ಎಸ್. ನೇಮಗೌಡ ಮಾತನಾಡಿ, 'ಥರ್ಡ್ ಐ' ಅಳವಡಿಕೆಯಾದಾಗಿನಿಂದ ಶೇ.80ರಷ್ಟು ಅಪಘಾತ ಸಂಖ್ಯೆಗಳು ಇಳಿಮುಖವಾಗಿದೆ. ಈ ಕಾರ್ಯದಿಂದ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವವರನ್ನು ಶೀಘ್ರ ಪತ್ತೆ ಹಚ್ಚಬಹುದು. ಮುಖ್ಯವಾಗಿ ನ್ಯಾಯಾಲಯವು 'ಥರ್ಡ್ ಐ' ಸೆರೆಹಿಡಿದ ಚಿತ್ರಗಳನ್ನು ಮಾನ್ಯ ಮಾಡುತ್ತದೆ. ಹೀಗಾಗಿ ನಾಗರಿಕರು ಹೆಲ್ಮೆಟ್ ಧರಿಸಿ ವಾಹನ ಚಲಾಯಿಸಬೇಕು ಎಂದರು.

ಸಂಗನಗೌಡ ಪಾಟೀಲ, ಸಿಪಿಐ ಎಸ್.ಎಸ್. ಬಿಳಗಿ, ಪಿಎಸ್‌ಐ ಎಲ್.ಕೆ. ಜೂಲಕಟ್ಟಿ, ಬಾವಾಸಾಬ ಬೆಟಗೇರಿ, ಸಂಗಪ್ಪ ಜಿಡ್ಡಿಬಾಗಿಲ, ಸಂಗು ನವಲಗುಂದ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

## ಸಂಪಾದಕೀಯ

### ಬಿಜೆಪಿಯಲ್ಲಿ ಪುತ್ರ ವ್ಯಾಮೋಹ, ಕುಟುಂಬ ರಾಜಕಾರಣ ಸಂಸ್ಕೃತಿ

ಕುಟುಂಬ ರಾಜಕಾರಣ ಕಾಂಗ್ರೆಸ್ ಪಕ್ಷಕ್ಕೆ ಮಾತ್ರ ಸೀಮಿತವಾಗಿಲ್ಲ ಎನ್ನುವುದು ಈಗ ಎಲ್ಲರಿಗೂ ಗೊತ್ತಿರುವ ವಿಚಾರವೇ. ಅದರಲ್ಲೂ ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಕುಟುಂಬ ರಾಜ-ಕಾರಣ ಮತ್ತು ಪುತ್ರ ವ್ಯಾಮೋಹ ಚರ್ಚೆಗೆ ಕಾರಣವಾಗುತ್ತಿದೆ.

ಲೋಕಸಭೆ ಚುನಾವಣೆಗೆ ಅಭ್ಯರ್ಥಿಗಳ ಹೆಸರು ಅಂತಿಮಗೊಳ್ಳುವ ಮುನ್ನವೇ ಯಡಿಯೂರಪ್ಪ ಅವರಿಗೆ ಚಿಂತೆ ಶುರುವಾಗಿದೆ. ಕಾಂತೇಶ್‌ಗೆ ಹಾವೇರಿ ಕ್ಷೇತ್ರದ ಟಿಕೆಟ್ ಸಿಗದಿದ್ದರೆ ಶಿವಮೊಗ್ಗ ಲೋಕಸಭಾ ಕ್ಷೇತ್ರದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುವ ಬೆದರಿಕೆಯನ್ನು ಕೆ.ಎಸ್. ಈಶ್ವರಪ್ಪ ಒಡ್ಡಿದ್ದಾರೆ.

ಬೆದರಿಕೆಗೆ ಹೆದರಿ ಒಂದು ವೇಳೆ ಕಾಂತೇಶ್‌ಗೆ ಹಾವೇರಿ ಟಿಕೆಟ್ ಕೊಡಿಸುವಲ್ಲಿ ಯಡಿಯೂರಪ್ಪ ಯಶಸ್ವಿಯಾದರೆ, ಹಾವೇರಿ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಸೋಲುವುದು ನಿಶ್ಚಿತವಾಗಲಿದೆ. ಹೀಗಾಗಿ ಯಡಿಯೂರಪ್ಪ ಮತ್ತು ವಿಜಯೇಂದ್ರಗೆ ಇದು ಪರೀಕ್ಷೆಯ ಕಾಲ.

ಯಡಿಯೂರಪ್ಪ ಕುಟುಂಬಕ್ಕೆ ಹಾವೇರಿ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಗೆಲ್ಲಲೇಬೇಕು ಎನ್ನುವ ಸದಿಚ್ಛೆ ಹೊಂದಿದ್ದರೆ ಕಾಂತೇಶ್ ಬಿಟ್ಟು ಲಿಂಗಾಯತ ಸಮುದಾಯದ ನಾಯಕರೊಬ್ಬರಿಗೆ ಟಿಕೆಟ್ ಕೊಡಲಿ. ಆದರೆ ಅವರು ಹಾಗೆ ಮಾಡುವುದಿಲ್ಲ.


ಕಾಂತೇಶ್‌ಗೆ ಟಿಕೆಟ್ ತಪ್ಪಿದರೆ ತಮ್ಮ ಪುತ್ರ ರಾಘವೇಂದ್ರ ಸೋಲುವುದು ನಿಶ್ಚಿತ ಎನ್ನುವ ಸತ್ಯದ ಅರಿವಿದೆ. ಹೀಗಾಗಿ ಹಾವೇರಿ ಕ್ಷೇತ್ರವನ್ನು ಬಲಿಕೊಟ್ಟು, ಪುತ್ರ ವ್ಯಾಮೋಹವನ್ನು ಮೆರೆಯುವ ಸಿದ್ಧತೆಯಲ್ಲಿದ್ದಾರೆ ಯಡಿಯೂರಪ್ಪ.

ಇದು ಕೇವಲ ಯಡಿಯೂರಪ್ಪನವರ ಕಥೆ ಮಾತ್ರವಲ್ಲ. ಕೆಎಸ್ ಈಶ್ವರಪ್ಪ ಸಹ ಪುತ್ರ ವ್ಯಾಮೋಹಕ್ಕೆ ಜೋತು ಬಿದ್ದವರೇ. ಅದೇ ರೀತಿ ಅನೇಕ ಬಿಜೆಪಿ ನಾಯಕರು ತಮಗಿಲ್ಲದಿದ್ದರೂ ತಮ್ಮ ಸುಪುತ್ರರಿಗೆ ಟಿಕೆಟ್ ಕೊಡಿಸಲು ಲಾಬಿ ನಡೆಸಿರುವುದು ನೋಡಿದರೆ, ಕಾಂಗ್ರೆಸ್ ಕುಟುಂಬ ರಾಜಕಾರಣದ ಸಂಸ್ಕೃತಿ ಬಿಜೆಪಿಗೂ ಬಂದಿದೆ ಎನ್ನುವುದು ಸ್ಪಷ್ಟವಾಗುತ್ತದೆ.

ಪುಸ್ತಕ ಪರಿಚಯ

### ಎಲ್ಲ ಬಗೆಯ ವೈದ್ಯರು ಓದಲೇಬೇಕಾದ ಮಹತ್ತರ ಅಭಿನಂದನಾ ಗ್ರಂಥ

# ವೈದ್ಯರಿಗೆ ದಾರಿದೀಪವಾಗುವ 'ಡಾಕ್ಟರ್ ಬಿಂದಣ್ಣ'




**ಡಾಕ್ಟರ್ ಬಿಂದಣ್ಣ**
(ಡಾ. ಬಿ.ಆರ್. ಇನಾಮದಾರ ಅವರ ಅಭಿನಂದನಾ ಗ್ರಂಥ)
**ಸಂಪಾದಕರು:**
ಅಂದಾನೆಪ್ಪ ವಿಭೂತಿ.
**ಪ್ರಕಾಶಕರು:**
ಡಾ. ಎಂ.ಎಂ. ಕಲಬುರ್ಗಿ ಅಧ್ಯಯನ ಸಂಸ್ಥೆ,
ಜ. ತೋಂಟದಾರ್ಯ ಮಠ ಗದಗ.
ಪುಟಗಳು: 184.
ಬೆಲೆ: 200ರೂ.

ಸೊರಟೂರಿನ ಡಾ. ಬಿಂದಣ್ಣ ಇನಾಮದಾರ ಅವರ ಹೆಸರು ಈ ನಾಡಿನಲ್ಲಿ ಚಿರಪರಿಚಿತ. ಪಾರ್ಶ್ವ ವಾಯು ರೋಗಕ್ಕೆ ಉತ್ತಮ ಚಿಕಿತ್ಸೆ ಕಂಡು ಹಿಡಿದದ್ದಲ್ಲದೆ ಸಹಸ್ರಾರು ರೋಗಿಗಳಿಗೆ ಚಿಕಿತ್ಸೆ ನೀಡಿ ಅವರನ್ನು ಗುಣಮುಖರನ್ನಾಗಿಸಿ, ಅವರ ಮೊಗದಲ್ಲಿ ಮಂದಹಾಸ ಮೂಡಿಸಿದವರು ಡಾ. ಬಿಂದಣ್ಣ ಇನಾಮದಾರವರು.

2018ರಲ್ಲಿಯೇ ಜಗದ್ಗುರು ತೋಂಟದಾರ್ಯ ಸಂಸ್ಥಾನ ಮಠದ ಡಾ. ಎಂ.ಎಂ. ಕಲಬುರ್ಗಿ ಅಧ್ಯಯನ ಸಂಸ್ಥೆಯಿಂದ ಪ್ರಕಟಗೊಂಡ ಈ ಗ್ರಂಥವನ್ನು ಪತ್ರಕರ್ತ, ಲೇಖಕ ಅಂದಾನೆಪ್ಪ ವಿಭೂತಿಯವರು ಸಂಪಾದಿಸಿದ್ದಾರೆ. ಕೇವಲ ಸಂಪಾದನೆಯೊಂದನ್ನೇ ಮಾಡದೆ ಈ ಗ್ರಂಥವು ಇಂದಿನ ಆಯುರ್ವೇದ ವೈದ್ಯರಿಗೆ ಒಂದು ಆಕರ ಗ್ರಂಥವಾಗುವಲ್ಲಿ ಎಲ್ಲ ರೀತಿಯ ಶ್ರಮವನ್ನೂ ವಿಭೂತಿಯವರು ವಹಿಸಿರುವುದು ಪುಸ್ತಕವನ್ನು ಓದುತ್ತ ಹೋದಂತೆ ತಿಳಿಯುತ್ತದೆ.

ಡಾಕ್ಟರ್ ಬಿ.ಆರ್. ಇನಾಮದಾರ ಅರ್ಥಾತ್ ಡಾ. ಬಿಂದಣ್ಣ ಹುಟ್ಟಿದ್ದು 1928ರ ಡಿಸೆಂಬರ್ 2ರಂದು. ಮೊದಲಿನಿಂದಲೂ ತುಂಟ ಹುಡುಗನಾಗಿದ್ದ ಬಿಂದಣ್ಣ, ಮನೆಯಲ್ಲಿದ್ದವರಿಗೆಲ್ಲ ಸ್ವಲ್ಪ ಕಿರಿಕಿರಿಯ ಮಗನಾಗಿದ್ದ. ಇವನು ಹೇಗೆ ಉದ್ಧಾರವಾದಾನೋ ಎಂದು ತಂದೆ ರಾಮರಾವ, ತಾಯಿ ಜಾನಕಿಬಾಯಿ ಮತ್ತು ಬಂಧುಗಳು ಯೋಚಿಸುತ್ತಿದ್ದರೆ, ಮುಂದೊಂದು ದಿನ ಇದೇ ತುಂಟ ಬಿಂದಣ್ಣ ಡಾ. ಬಿಂದಣ್ಣನಾಗಿ ಇಡೀ ನಾಡೇ ಮೆಚ್ಚುವಂತೆ ಬದುಕಿದ್ದು ಮನೆಯವರಿಗೆಲ್ಲರಿಗೂ ಆನಂದ, ಹೆಮ್ಮೆಯನ್ನು ಮೂಡಿಸಿತ್ತು.

ಕೇವಲ ವೈದ್ಯನಾಗಿ ಮಾತ್ರವಲ್ಲದೆ ಕೃಷಿಕನಾಗಿ, ಸಮಾಜದ ಸೇವಕನಾಗಿ, ಧಾರ್ಮಿಕ ಕಾರ್ಯಗಳಿಗೆ ಉದಾರವುಳ್ಳ ವ್ಯಕ್ತಿಯಾಗಿ ಬಿಂದಣ್ಣ ಮಾಡಿದ ಕಾರ್ಯಗಳು ಒಂದೆರಡಲ್ಲ. ಲೆಕ್ಕವಿಡಲೂ ಸಾಧ್ಯವಿಲ್ಲ. ನಮ್ಮಲ್ಲಿ ಏನಿದೆಯೋ ಅದೆಲ್ಲವನ್ನೂ ನಾವೇ ಅನುಭವಿಸಿ, ನಾವೇ ತಿಂದು ತೇಗುವದರ ಬದಲಾಗಿ ಇದ್ದುದನ್ನು ಹಂಚಿಕೊಂಡು ತಿಂದರೆ ಅದೆಷ್ಟು ಚೆಂದ ಎಂಬುದನ್ನು ಈ ಜಗತ್ತಿಗೆ ಮನಗಾಣಿಸಿದವರು ಬಿಂದಣ್ಣನವರು.

ಸೈಕಲ್‌ನ್ನೇ ತಮ್ಮ ವಾಹನವನ್ನಾಗಿಸಿಕೊಂಡು ಸುತ್ತಲಿನ ಗ್ರಾಮಗಳಿಗೆ ಡಾ. ಬಿಂದಣ್ಣ ಸವಾರಿ ಹೊರಡುತ್ತಿದ್ದ ಸಂಗತಿಯನ್ನು ಅಂದಾನೆಪ್ಪನವರು ಬಹಳಷ್ಟು ಸೊಗಸಾಗಿ ವರ್ಣಿಸಿದ್ದಾರೆ. ಅಂದಿನ ದಿನಗಳಲ್ಲಿ ಹೆರಿಗೆ ನೋವು ತಿನ್ನುವ ಮಹಿಳೆಯರ ಪಾಲಿಗೆ ಡಾ. ಬಿಂದಣ್ಣ ಸಂಜೀವಿನಿಯೇ ಆಗಿದ್ದರು.

ವೈದ್ಯರೆಂದರೆ ರೋಗಿಗಳ ದೃಷ್ಟಿಯಲ್ಲಿ ದೇವರ ಸಮಾನ. ಆ ಸ್ಥಾನ ಉಳಿಸಿಕೊಳ್ಳಬೇಕಾದುದು ವೈದ್ಯರಾದವರ ಕರ್ತವ್ಯ, ಹೊಣೆಗಾರಿಕೆ. ವೈದ್ಯಕೀಯ ವೃತ್ತಿಯಲ್ಲಿ ಮಾನವೀಯತೆ ಮುಖ್ಯ. ಮನುಷ್ಯತ್ವ ಮರೆತು ಯಾವ ಕೆಲಸ ಮಾಡಿದರೂ ಅದು ತಪ್ಪಾಗುತ್ತದೆ. ಡಾ. ಬಿಂದೂರಾವ ಅವರಂತೆ ನಾನೂ ಜಮೀನ್ದಾರ ಕುಟುಂಬದಲ್ಲಿ ಬೆಳೆದು ಬಂದವನು. ಆದರೆ ನಮ್ಮಿಬ್ಬರಿಗೂ ಎಂದಿಗೂ ಹಣ ಪ್ರಧಾನವಾಗದೆ ಗುಣ ಪ್ರಧಾನವಾಗಿದೆ ಎಂಬ ಮಾತುಗಳು ಅದೆಷ್ಟು ಮನೋಜ್ಞವಾಗಿವೆಯಲ್ಲವೆ?

ಇಂದಿನ ರಾಜಕಿಯದ ಬಗ್ಗೆಯೂ ಬಿಂದಣ್ಣನವರಿಗೆ ಏನೋ ಒಂದು ಬಗೆಯ ತಾತ್ಸಾರವಿತ್ತು. ಭ್ರಷ್ಟಾಚಾರ ಮಿತಿ ಮೀರಿರುವ ಇಂದಿನ ರಾಜಕಾರಣಿಗಳೆಂದರೆ ಅವರಿಗೆ ಅಲರ್ಜಿ. ಹೀಗಾಗಿ ಹೆಚ್ಚಾಗಿ ಅವರು ರಾಜಕೀಯದೆಡೆಗೆ ಒಲವು ತೋರದೆ ತಮ್ಮ ಕಾಯಕದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಜನಾನುರಾಗಿಯಾದರು. ಸರಿಸುಮಾರು ಒಂಬತ್ತು ದಶಕಗಳ ಕಾಲ ಬದುಕಿದ್ದ ಬಿಂದಣ್ಣನವರು ತಮ್ಮ ಜೀವನದ ಪ್ರತಿ ನಿಮಿಷವನ್ನೂ ರೋಗಿಗಳ, ಸಾರ್ವಜನಿಕರ ಸೇವೆಯಲ್ಲಿಯೆ ಕಳೆದರು ಎಂಬುದನ್ನು ಓದಿದಾಗ ಇಂತಹ ಮಹಾಚೇತನ ನಮ್ಮ ನಡುವೆ ಇದ್ದರೇ ಎಂದು ಅಚ್ಚರಿಯಾಗುತ್ತದೆ.

ಬಿಂದಣ್ಣನವರನ್ನು ಕುರಿತು ಸುಮಾರು ನಲವತ್ತು ಜನ ಅಭಿಮಾನಿಗಳು ತಮ್ಮ ಅನಿಸಿಕೆಯನ್ನು, ಹಲವಾರು ಮಠಾಧೀಶರು ತಮ್ಮ ಆಶೀರ್ವಾದವನ್ನು ನೀಡಿ ಬಿಂದಣ್ಣನವರನ್ನು ಹಾರೈಸಿದ್ದಾರೆ. ಇದರಲ್ಲಿ ಡಿ.ಆರ್. ಪಾಟೀಲ, ಸಚಿವ ಎಚ್.ಕೆ. ಪಾಟೀಲ, ಗುರಣ್ಣ ಬಳಗಾನೂರ, ಡಾ. ಜಿ.ಬಿ ಸತ್ತೂರ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಆನಂದ ಪೋತ್ನಿಸ್, ಡಾ. ಹೊಂಬಣ್ಣವರ ಹೀಗೆ ಅನೇಕ ಗಣ್ಯರು ಈ ಲೇಖಕ ಬಳಗದಲ್ಲಿ ಸೇರಿದ್ದಾರೆ. ಎಲ್ಲ ಲೇಖನಗಳೂ ಅತ್ಯಂತ ಹೃದ್ಯಂಗಮವಾಗಿದ್ದು, ಡಾ. ಬಿಂದಣ್ಣನವರ ಬಗ್ಗೆ ಇರುವ ಅಭಿಮಾನವನ್ನು ಎತ್ತಿ ತೋರುತ್ತಿವೆ. ನರೇಗಲ್ಲದ ಡಾ. ರಾಜೇಂದ್ರ ಗಚ್ಚಿನಮಠ ಅರ್ಧಾಂಗ ವಾಯು ಬಗ್ಗೆನೆ ವಿಶೇಷ ಲೇಖನ ಬರೆದಿದ್ದಾರೆ. ಇಂದಿನ ಯುವ ಆಯುರ್ವೇದ ವೈದ್ಯರಿಗೆ ಈ ಸೃಷ್ಟಿಯಲ್ಲಿ ಅದೆಷ್ಟು ಔಷಧಿ ಸಸ್ಯಗಳಿವೆ ಎಂಬುದನ್ನು ಪುಸ್ತಕದಲ್ಲಿ ಅಂದಾನೆಪ್ಪ ಸೂಚಿಸಿದ್ದಾರೆ. ಆದ್ದರಿಂದ ಈ ಗ್ರಂಥವು ಆಯುರ್ವೇದ ವೈದ್ಯರಿಗೆ ಕೈಪಿಡಿಯಾಗಿದೆ.

ಇಷ್ಟು ಹೇಳಿದರೆ ಬಿಂದಣ್ಣನವರ ವ್ಯಕ್ತಿತ್ವವನ್ನು ಸಂಪೂರ್ಣವಾಗಿ ಕಟ್ಟಿಕೊಟ್ಟಂತಾಗುವುದಿಲ್ಲ. ಬಿಡುವು ಮಾಡಿಕೊಂಡು ಒಮ್ಮೆ ಓದಿ ನೋಡಿ. ಅದರಲ್ಲೂ ಎಲ್ಲ ಬಗೆಯ ವೈದ್ಯರು ಓದಲೇಬೇಕಾದ ಮಹತ್ತರ ಅಭಿನಂದನಾ ಗ್ರಂಥ 'ಡಾಕ್ಟರ್ ಬಿಂದಣ್ಣ.'

**– ಅರುಣ ಬಿ. ಕುಲಕರ್ಣಿ.**
ನರೇಗಲ್ಲ-ಕೋಡಿಕೊಪ್ಪ.

## ಕಾಂತೇಶ ಈಶ್ವರಪ್ಪಗೆ ಹಾವೇರಿ ಕ್ಷೇತ್ರದ ಟಿಕೆಟ್ ನೀಡಿ



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬಿಜೆಪಿ ಪಕ್ಷವನ್ನು ಕಟ್ಟಿ ಬೆಳೆಸುವಲ್ಲಿ ತಮ್ಮ ಇಡೀ ಜೀವನವನ್ನೇ ಸಮರ್ಪಿಸಿಕೊಂಡ ಪಕ್ಷದ ಹಿರಿಯ ನಾಯಕ ಕೆ.ಎಸ್. ಈಶ್ವರಪ್ಪ ಅವರ ಪುತ್ರ ಕಾಂತೇಶ ಈಶ್ವರಪ್ಪ ಅವರಿಗೆ ಹಾವೇರಿ ಲೋಕಸಭಾ ಕ್ಷೇತ್ರದ ಟಿಕೆಟ್ ಕೊಡಲೇಬೇಕು ಎಂದು ತಾಲೂಕಿನ ಬಾಲೆಹೊಸೂರ ಗ್ರಾಮದ ಪಕ್ಷದ ಕಾರ್ಯಕರ್ತರು ಪಕ್ಷದ ಹೈಕಮಾಂಡ್‌ಗೆ ಒತ್ತಾಯಿಸಿದರು.

ಈ ವೇಳೆ ಮಾತನಾಡಿದ ದೇವಪ್ಪ ಮತ್ತೂರ, ಕೆ.ಎಸ್. ಈಶ್ವರಪ್ಪ ಮತ್ತು ಕಾಂತೇಶರಿಗೆ ಕಳೆದ ಬಾರಿ ವಿಧಾನಸಭೆ ಚುನಾವಣೆ ವೇಳೆ ಅವಕಾಶ ನೀಡದಿದ್ದಾಗಲೂ ತೋರಿದ ಪಕ್ಷ ನಿಷ್ಠೆಗೆ ಇಡೀ ರಾಜ್ಯದ ಜನತೆ ಮತ್ತು ಸ್ವತಃ ಪ್ರಧಾನಮಂತ್ರಿಗಳೇ ಪ್ರಶಂಸಿಸಿದ್ದಾರೆ. ಪಕ್ಷಾಂತರ, ಪಕ್ಷದ್ರೋಹದ ಕೆಲಸ ಮಾಡದೇ ರಾಜಕಾರಣಿಗಳಿಗೆ ಮಾದರಿಯಾದ ಈಶ್ವರಪ್ಪ ಅವರು ಪಕ್ಷ ಸಂಘಟನೆಗಾಗಿ ಅವಿರತ ಶ್ರಮಿಸಿದ್ದಾರೆ. ಇದೀಗ ಅವರ ಮಗನ ರಾಜಕೀಯ ಭವಿಷ್ಯಕ್ಕಾಗಿ ಪಕ್ಷದ ಹೈಕಮಾಂಡ್ ಅವಕಾಶ ನೀಡಬೇಕು. ಅಂದಾಗ ಮಾತ್ರ ಪಕ್ಷದ ನಿಷ್ಠಾವಂತರಿಗೆ ಬೆಲೆ ಸಿಗುತ್ತದೆ ಇಲ್ಲದಿದ್ದರೆ ಅವರು ಕೈಗೊಳ್ಳುವ ನಿರ್ಧಾರಕ್ಕೆ ನಾವೆಲ್ಲ ಬೆಂಬಲವಾಗಿ ನಿಲ್ಲಬೇಕಾಗುತ್ತದೆ ಎಂದರು.

ಈ ವೇಳೆ ನಿಂಗಪ್ಪ ಪ್ಯಾಟಿ, ಶಿವಲಿಂಗಪ್ಪ ಮಿಳ್ಳಿ, ನಾಗಯ್ಯ ಮಠಪತಿ, ಮಾರುದ್ರಪ್ಪ ಬಡಿಗೇರ, ವಿರುಪಾಕ್ಷಪ್ಪ ಮರಳಿಹಳ್ಳಿ, ಪರಶುರಾಮ ಮೈಲಾರಿ, ನೀಲಪ್ಪ ಮಾಯಕೊಂಡ, ದೇವಪ್ಪ ಬಡಿಗೇರ, ಸಿದ್ದಪ್ಪ ನೆಗಳೂರು, ರವಿ ಮೂಲಿಮನಿ, ರಮೇಶ ಜೋಗೇರ, ಸಂಜೀವ ಸಾಲಿ, ಹೂವಪ್ಪ ದೀಪಾವಳಿ, ಮಾರುತಿ ಸತ್ಯಮ್ಮನವರ ಸೇರಿ ಪಕ್ಷದ ಕಾರ್ಯಕರ್ತರು ಇದ್ದರು.

# ನಿರಂತರವಾಗಿ ಓದುವುದನ್ನು ರೂಢಿಸಿಕೊಳ್ಳಿ



■ **ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ತಾಲೂಕಿನ ಹಳ್ಳಿಕೇರಿಯ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ 7ನೇ ತರಗತಿ ವಿದ್ಯಾರ್ಥಿನಿಯರ ಬೀಳ್ಕೊಡುಗೆ ಹಾಗೂ ಮಹಾಸರಸ್ವತಿ ಪೂಜಾ ಸಮಾರಂಭ ಜರುಗಿತು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಜಮಖಂಡಿಯ ಸರಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯದ ಪ್ರವಾಚಕ /ಉಪನಿರ್ದೇಶಕ ಡಿ.ಐ. ಅಸುಂಡಿ ಮಾತನಾಡಿ, ವಿದ್ಯಾರ್ಥಿ ಜೀವನ ಬಹಳ ಅಮೂಲ್ಯವಾದುದು. ಈ ಅವಧಿಯಲ್ಲಿ ವಿದ್ಯಾರ್ಥಿಗಳು ಪರಿಶ್ರಮದಿಂದ ಅಧ್ಯಯನ ಮಾಡಿ ವಿಶೇಷ ಸಾಧನೆ ಸಾಧಿಸುವುದು ಅಗತ್ಯವಿದೆ. ಇಂದಿನ ಸ್ಪರ್ಧಾ ಜಗತ್ತಿನಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಅಮೂಲಾಗ್ರ ಬದಲಾವಣೆಗಳಾಗುತ್ತಿದ್ದು, ಅವುಗಳಿಗೆ ಸ್ಪಂದಿಸಿ ನಿರಂತರವಾಗಿ ಓದುವುದನ್ನು ರೂಢಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ ಎಸ್‌ಡಿಎಂಸಿ ಅಧ್ಯಕ್ಷೆ ರೇಣುಕಾ ಪ್ರಶಾಂತ ಚನ್ನವೀರಗೌಡ್ರ ಮಾತನಾಡಿ, ವಿದ್ಯಾರ್ಥಿನಿಯರು ಉತ್ತಮ ಅಭ್ಯಾಸ ರೂಢಿಸಿಕೊಂಡು ಸತ್ಪ್ರಜೆಗಳಾಗಿ ಶಾಲೆಗೆ, ಗ್ರಾಮಕ್ಕೆ ಕೀರ್ತಿ ತರುವಂತರಾಗಬೇಕೆಂದರು. ಎಸ್‌ಡಿಎಂಸಿ ಸದಸ್ಯ ಸಿದ್ದಪ್ಪ ನಾಯ್ಕರ ಉಪಸ್ಥಿತರಿದ್ದರು. ಕೆ.ಬಿ. ನದಾಫ, ಜೆ.ಸಿ. ಕುರಹಟ್ಟಿ, ಯು.ಎ. ಹಂಚಿನಾಳ ಅನಿಸಿಕೆ ವ್ಯಕ್ತಪಡಿಸಿದರು.

ಎಸ್.ಜಿ. ಶೀಲಭದ್ರ ಸ್ವಾಗತಿಸಿದರು. ಬಿ.ವಾಯ್. ಡೊಳ್ಳಿನ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಂ.ಡಿ. ಬೆಂತೂರ ಕಾರ್ಯಕ್ರಮ ನಿರೂಪಿಸಿದರು. ವ್ಹಿ.ವ್ಹಿ. ಕೊಬಳ್ಳಿ ವಂದಿಸಿದರು.

### ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಮಹಿಳಾ ದಿನಾಚರಣೆ

# ಮಹಿಳೆ ಎಲ್ಲ ರಂಗಗಳಲ್ಲಿಯೂ ಸಮರ್ಥಳು

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಇಂದಿನ ದಿನಗಳಲ್ಲಿ ಮಹಿಳೆ ಎಲ್ಲ ರಂಗಗಳಲ್ಲಿಯೂ ಸಮರ್ಥಳಾಗಿದ್ದಾಳೆ. ಈ ಹಿಂದಿನ ದಿನಗಳಲ್ಲಿ ನಾಲ್ಕು ಗೋಡೆಗಳ ಮಧ್ಯೆ ಮಾತ್ರ ಅವಳ ಬದುಕು ಎಂಬುದನ್ನು ದಾಟಿ ಮುಂದೆ ಬಂದಿರುವ ಮಹಿಳೆ, ಈ ಸಮಾಜದಲ್ಲಿ ಪುರುಷನಷ್ಟೇ ಸಮರ್ಪಕವಾಗಿ ಕಾರ್ಯಗಳನ್ನು ನಿರ್ವಹಿಸಬಲ್ಲಳು ಎಂಬುದನ್ನು ಅನೇಕ ಉದಾಹರಣೆಗಳ ಮೂಲಕ ಸಾಧಿಸಿ ತೋರಿಸಿದ್ದಾಳೆ ಎಂದು ಸಂಗೀತಗಾರ್ತಿ ರಾಜಶ್ರೀ ಕುಲಕರ್ಣಿ ಹೇಳಿದರು.

ಪಟ್ಟಣದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಆಚರಿಸಲಾದ ಮಹಿಳಾ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಗೂ ಒಂದು ವ್ಯಕ್ತಿತ್ವವಿದೆ. ಅವಳೂ ಸಹ ಪುರುಷರಂತೆ ಎಲ್ಲ ರೀತಿಯ ಶ್ರಮದಾಯಕ ಕಾರ್ಯಗಳನ್ನು ನಿರ್ವಹಿಸಬಲ್ಲಳು. ಅದಕ್ಕಾಗಿ ಅವಳಿಗಾಗಿಯೆ ಒಂದು ದಿನ ಮೀಸಲಿಡಬೇಕೆಂದು ಪ್ರತಿಪಾದಿಸಿದವರು ಕ್ಲಾರಾ ಜೆಟ್‌ಕಿನ್. 1911ರ ಮಾರ್ಚ್ 8ರಂದು ಈ ಕುರಿತು ತನ್ನ ಅಭಿಪ್ರಾಯವನ್ನು ಮಂಡಿಸಿದ ಅವರು ಮಹಿಳಾ ದಿನಾಚರಣೆಯನ್ನು ಜಾರಿಗೆ ತಂದಿದ್ದಾರೆ. ಇಂದಿನ ದಿನ ಮಹಿಳೆ ಮಾಡಿರುವ ಸಾಧನೆಗಳ ಕುರಿತು ಪ್ರಾತ್ಯಕ್ಷಿಕೆ, ಸಾಧನೆ ಮಾಡಿದ ಮಹಿಳೆಯರಿಗೆ ಸನ್ಮಾನ, ಮಹಿಳೆಯರಿಗೆಗಾಗಿ ರಾಜ್ಯ, ಕೇಂದ್ರ ಸರಕಾರಗಳು ಅನುಷ್ಠಾನ ಮಾಡಿರುವ ಕಾರ್ಯಕ್ರಮಗಳು, ಸಂಘ ಸಂಸ್ಥೆಗಳು ಮಹಿಳೆಯರಿಗಾಗಿ ಸಂಕಲ್ಪಿಸಿರುವ ಕಾರ್ಯಕ್ರಮಗಳು ಹೀಗೆ ಎಲ್ಲದರ ಬಗ್ಗೆ ಇಂದಿನ ದಿನ ಚರ್ಚೆ ನಡೆಯಬೇಕೆಂಬುದು ಜಟ್‌ಕಿನ್ ಅವರ ಆಶಯವಾಗಿತ್ತು ಎಂದರು.



ಸಂಚಾಲಕಿ ಸವಿತಕ್ಕ ಮಾತನಾಡಿ, ಮಹಿಳೆಯರಿಂದ ನಡೆಯುವ ಈ ವಿಶ್ವವಿದ್ಯಾಲಯವು ಮಹಿಳೆಯರಿಗಾಗಿಯೇ ಅನೇಕ ಕಾರ್ಯಕ್ರಮಗಳನ್ನು ರೂಪಿಸಿ ಅವರನ್ನು ಜಾಗೃತಗೊಳಿಸಲು ಪ್ರಯತ್ನಿಸುತ್ತಿದೆ. ಅವರಿಗೆ ಒತ್ತಡ ರಹಿತ ಬದುಕನ್ನು ಹೇಗೆ ಬಾಳಬೇಕು ಎಂಬುದರ ಬಗ್ಗೆ ಪಾಠವನ್ನು ನೀಡುತ್ತಿದೆ. ಭಗವಂತನ ಬಗ್ಗೆ ಜ್ಞಾನವನ್ನು ಪಡೆದುಕೊಂಡ ಮಹಿಳೆಯರು ತಮ್ಮ ಬದುಕಿನಲ್ಲಿ ಸಂತಸದ ಕ್ಷಣಗಳನ್ನು ಅನುಭವಿಸುತ್ತಿದ್ದಾರೆ. ಇದರಿಂದ ಅವರು ಮಾನಸಿಕವಾಗಿ, ದೈಹಿಕವಾಗಿ ಸಧೃಡಗೊಂಡು ತಮ್ಮ ಕುಟುಂಬದ ಸೇವೆಯ ಜೊತೆಗೆ ಸಮಾಜದ ಸೇವೆಯಲ್ಲಿಯೂ ತಮ್ಮನ್ನು ತಾವು ತೊಡಗಿಸಿಕೊಳ್ಳುತ್ತಿದ್ದಾರೆ ಎಂದರು.

ಶಿಕ್ಷಕಿ ಶ್ವೇತಾ ಕೊಟಗಿ ಮಾತನಾಡಿದರು. ವೇದಿಕೆಯ ಮೇಲೆ ಆರೋಗ್ಯ ಇಲಾಖೆಯ ರತ್ನಾ ಅವರೆಡ್ಡಿ, ಪ.ಪಂ. ಸದಸ್ಯೆ ಸುಮಿತ್ರಾ ಕಮಲಾಪುರ ಉಪಸ್ಥಿತರಿದ್ದರು. ಶಿಕ್ಷಕಿ ಕೆ.ವಿ. ಕಟ್ಟಿ, ನೇತ್ರಾ ಅಪ್ಪಣ್ಣವರ, ರತ್ನಾ ಬಾಣದ, ರೇಖಾ ದೇವರೆಡ್ಡಿ, ಹೇಮಾ ಚನ್ನಗಿರಿ, ನರೇಗಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರದ ಮಹಿಳಾ ಕಾರ್ಯಕರ್ತರು, ಪಟ್ಟಣ ಪಂಚಾಯತಿಯ ಮಹಿಳಾ ಸದಸ್ಯರು, ಧರ್ಮಸ್ಥಳ ಗುಂಪಿನ ಎಲ್ಲ ಸದಸ್ಯರು ಪಾಲ್ಗೊಂಡಿದ್ದರು.

# ಕ.ವಿ.ಮಂ.ನಿವೃತ್ತ ನೌಕರರ ಮಾಸಿಕ ಸಭೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಕ.ವಿ.ಮಂ. ನಿವೃತ್ತ ನೌಕರರ ಮಾಸಿಕ ಸಭೆ ವಿಭಾಗೀಯ ಕಛೇರಿಯ ಆವರಣದಲ್ಲಿರುವ ಸಮುದಾಯ ಭವನದಲ್ಲಿ ಎ.ಎನ್.ಬಸ್ತಿ ಅವರ ಅಧ್ಯಕ್ಷತೆಯಲ್ಲಿ ಜರುಗಿ-ತು. ಎಂ.ಕೆ. ಮೊರಬದ ಹಾಗೂ ಕೆ.ಜಿ. ತಿರ್ಲಾಪೂರ ತಮ್ಮ ಜನ್ಮದಿನದ ಪ್ರಯುಕ್ತ ದಾಸೋಹ ಸೇವೆಯನ್ನು ವಹಿಸಿಕೊಂಡಿದ್ದರು



ಕಾರ್ಯಾಧ್ಯಕ್ಷ ಜಿ.ಎಂ. ಯಾನಮಶೆಟ್ಟಿ ಸಂಘ ನಡೆದು ಬಂದ ದಾರಿ ಹಾಗೂ ಅದರ ಚಟುವಟಿಕೆಗಳ ಬಗ್ಗೆ ವಿವರಿಸಿದರು. ವಾಯ್.ಬಿ. ಭಾನಾಪೂರ ಶರಾವತಿ ಪತ್ತಿನ ಸಹಕಾರಿ ಸಂಘ ಹಾಗೂ ಸಮುದಾಯ ಭವನದ ಬಗ್ಗೆ ವಿವರಿಸಿದರು. ಎಸ್.ಬಿ. ಓಲಿ ಅವರು ಕೇಂದ್ರ ಸಮಿತಿಯ ಸಭೆಯಲ್ಲಿ ನಡೆದ ಚಟುವಟಿಕೆಗಳ ಬಗ್ಗೆ ವಿವರ ನೀಡಿದರು.

ಎನ್.ವ್ಹಿ. ಹೇಮಗಿರಿಮಠ, ಬಿ.ಎನ್. ಫಾಳಿ, ಕೆ.ಎಸ್. ಲಕ್ಕುಂಡಿ, ಬಿ.ಎಂ. ಬಾಣಿ, ಫಕ್ಕೀರಪ್ಪ ತುಪ್ಪದ, ಎಸ್. ಎಫ್. ಸೈದಾಪೂರ, ಬಿ.ಎಂ. ಕಂಬಿ, ಕೆ.ಜಿ. ಜಲರಡ್ಡಿ, ಎಸ್. ಎಸ್. ಸ್ಥಾವರಮಠ, ಎನ್. ಎಮ್. ಕೊಣ್ಣೂರ, ಆಯ್. ಎಸ್. ಸರೂರ, ಜಿ.ಆರ್. ಅಗಸಿಯವರ, ಎಸ್.ಆರ್. ಕಲಾಲ, ಎಚ್.ಬಿ. ಬಡಿಗೇರ, ಎಸ್.ಎಸ್. ಹಿರೇಮಠ, ವ್ಹಿ.ಎಲ್. ಅಯ್ಯನಗೌಡರ, ಬಿ.ಎಸ್. ಪೂಜಾರ, ನಾಗನಗೌಡ, ಚಿಕ್ಕಣ್ಣವರ, ಆರ್.ಎಂ. ಹಿತ್ತಲಮನಿ, ಸಿ.ವ್ಹಿ. ಬೋಳಣ್ಣವರ ಮುಂತಾದವರು ಸಭೆಯಲ್ಲಿ ಉಪಸ್ಥಿತರಿದ್ದರು. ಎನ್.ಎಂ. ಬಾಗಲಿ ಪ್ರಾರ್ಥಿಸಿದರು. ಬಿ.ವ್ಹಿ. ಕಾಮಣ್ಣವರ ಸ್ವಾಗತಿಸಿದರು. ವ್ಹಿ.ಪಿ.ಸವಡಿ ವಂದಿಸಿದರು.

# ದ್ವಾದಶ ಜ್ಯೋತಿರ್ಲಿಂಗಗಳ ಮೆರವಣಿಗೆ



■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಪರಿವಾರದ ವತಿಯಿಂದ ಮಹಾಶಿವರಾತ್ರಿ ಪ್ರಯುಕ್ತ ಡೊಳ್ಳು, ವಾದ್ಯ ವೈಭವದೊಂದಿಗೆ ವಾಹನಗಳ ಮೇಲೆ ದ್ವಾದಶ ಜೋರ್ತಿಲಿಂಗ ದರ್ಶನವನ್ನು ಮಾಡಿಸಲಾಯಿತು. ಊರಿನ ಪ್ರಮುಖ ರಸ್ತೆಯಲ್ಲಿ ಸಂಚರಿಸಿ ಕೇಸರಿ ಧ್ವಜಗಳನ್ನು ಹಿಡಿದು ಜನರಿಗೆ ಶಿವಲಿಂಗ ದರ್ಶನ ಮಾಡಿಸಿದರು.

ಈ ಸಂದರ್ಭದಲ್ಲಿ ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ಬಿ.ಕೆ. ಸವಿತಕ್ಕನವರ ನೇತೃತ್ವದಲ್ಲಿ ನಿವೃತ್ತ ಶಿಕ್ಷಕ ಶಿವಪ್ಪ ಧರ್ಮಾಯತ, ಈರಣ್ಣ ಹತ್ತಿಕಟಗಿ, ಲಿಂಗರಾಜ ಬೋಪಳಾಪುರ, ಶರಣಪ್ಪ ಹೊಸ್ಮನಿ, ಮಲ್ಲಣ್ಣ ಕಾತರಕಿ, ಭಾರತಿ ಶಿರ್ಸಿ, ಎಂ.ಎಸ್. ಪೂಜಾರ, ರವಿ ದೇವರಡ್ಡಿ ಸೇರಿದಂತೆ ಅಬ್ಬಗೇರಿ, ಕೋಚಲಾಪುರ, ಸುತ್ತುಮುತ್ತಲಿನ ಗ್ರಾಮಗಳ ಶಿವಭಕ್ತರು, ರೈತರು, ಸಾರ್ವಜನಿಕರು ಪಾಲ್ಗೊಂಡಿದ್ದರು. ಮೆರವಣಿಗೆ ಉದ್ದಕ್ಕೂ ಜ್ಯೋತಿರ್ಲಿಂಗ ಮಹತ್ವ, ಜನರಲ್ಲಿ ಭಾವೈಕ್ಯತೆ ಮೂಡಿಸುತ್ತಾ, ಶಿವ ಸಂದೇಶ ಸಾರುತ್ತಾ ಜೀವನದ ರೀತಿ ಬಗ್ಗೆ ಅಕ್ಕಂದಿರರು ಮಾರ್ಗದರ್ಶನ ನೀಡಿದರು.

# ಶಿವ ಜ್ಯೋತಿ ಸ್ವರೂಪಿಯಾಗಿದ್ದಾನೆ



■ **ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಜನರು ಅಜ್ಞಾನದ ಕತ್ತಲೆಯಲ್ಲಿ ಮುಳುಗಿರುವಾಗ ಶಿವನು ಈ ಭೂಮಿಗೆ ಅವತರಿಸಿ ಬಂದು ಈ ಜಗತ್ತಿನ ಆತ್ಮಗಳು ಜಾಗೃತಿಗೊಳಿಸುತ್ತಿದ್ದಾನೆ ಎಂದು ಬ್ರಹ್ಮಕುಮಾರಿ ಬಿ.ಕೆ. ಸರೋಜಕ್ಕ ಹೇಳಿದರು.

ಇಲ್ಲಿಯ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ಶಾಖೆಯಲ್ಲಿ ಹಮ್ಮಿಕೊಂಡಿದ್ದ 88ನೇ ಶಿವ ಜಯಂತಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಶಿವನು ಅಕಾಯ, ಅಶರೀರಿ ಆಗಿದ್ದು, ಜ್ಯೋತಿ ಸ್ವರೂಪ ಬಿಂದುವಾಗಿದ್ದಾನೆ. ಪರಮಾತ್ಮನಿಗೆ ಜನನ-ಮರಣವಿಲ್ಲ. ಶಿವನನ್ನು ಶ್ರದ್ಧೆಯಿಂದ ಪ್ರಾರ್ಥಿಸಿದರೆ ಮಾತ್ರ ಒಲಿಯುತ್ತಾನೆ ಎಂದರು.

ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಶಿವ ಧ್ವಜಾರೋಹಣ ನೆರವೇರಿಸಿ, ಜ್ಯೋತಿ ಬೆಳಗಿಸಿ ಕಾರ್ಯಕ್ರಮ ಉದ್ಘಾಟಿಸಿ, ಶಿವಲಿಂಗ ಮೆರವಣಿಗೆಗೆ ಚಾಲನೆ ನೀಡಿದರು. ಲಕ್ಕುಂಡಿ ಹಾಗೂ ಪಾಪನಾಶಿ ಗ್ರಾಮಗಳ ಪ್ರಮುಖ ಬೀದಿಯಲ್ಲಿ ಶಿವನ ಸಂದೇಶ ಸಾರುವ ಭಿತ್ತಿಪತ್ರಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ನಿವೃತ್ತ ಪ್ರಾಚಾರ್ಯ ಆರ್.ಎನ್. ಗೌಡರ, ಗ್ರಾ.ಪಂ. ಮಾಜಿ ಉಪಾಧ್ಯಕ್ಷೆ ಪ್ರೇಮಾ ಮಟ್ಟಿ, ಹಾತಲಗೇರಿ ಗ್ರಾ.ಪಂ ಸದಸ್ಯ ಈರಪ್ಪ ಬೇಲೇರಿ, ಪಾಪನಾಶಿ ಗ್ರಾ.ಪಂ ಸದಸ್ಯ ಈಶಪ್ಪ ಇಟಗಿ, ಸಿದ್ದಪ್ಪ ಚಬ್ಬರಭಾವಿ, ಈಶ್ವರಗೌಡ ಪಾಟೀಲ, ಕಮಲಾಕ್ಷಿ ಸಜ್ಜನರ, ಶಿವಲೀಲಾ ಮದ್ನೂರ ಇದ್ದರು.

## ಮನವಿಗೆ ಸ್ಪಂದಿಸಿದ ಪೊಲೀಸ್ ಇಲಾಖೆಗೆ ಅಭಿನಂದನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಜನಾಭಿವೃದ್ಧಿ ವೇದಿಕೆ ಗದಗ ಜಿಲ್ಲಾ ಘಟಕದ ಮನವಿಗೆ ಸ್ಪಂದಿಸಿ ಮುಂಡರಗಿಯ ನಗರದ (ಕೊಪ್ಪಳ ಕ್ರಾಸ್) ಹೃದಯ ಭಾಗದಲ್ಲಿ ಅಳವಡಿಸಿದ್ದ ಸಿ.ಸಿ. ಕ್ಯಾಮರಾವನ್ನು ಸ್ಥಳಾಂತರ ಮಾಡಿದಕ್ಕೆ ಮುಂಡರಗಿಯ ರೈತರು, ಕೂಲಿ ಕಾರ್ಮಿಕರ ಹಾಗೂ ಬೈಕ್ ಸವಾರರ ಪರವಾಗಿ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಮುಂಡರಗಿ ಪೊಲೀಸ್ ಠಾಣೆಯ ಸಿಪಿಐ ಮಂಜುನಾಥ ಕೂಸಗಲ್, ಪಿಎಸ್ಐ ಸುಮಾ ಗೊರಬಾಳ ಹಾಗೂ ಸಿಬ್ಬಂದಿಗಳಿಗೆ ಕನ್ನಡ ಜನಾಭಿವೃದ್ಧಿ ವೇದಿಕೆ ಅಭಿನಂದನೆ ಸಲ್ಲಿಸಿದೆ. ಜಿಲ್ಲಾಧ್ಯಕ್ಷ ಗಣೇಶ ಹಾತಲಗೇರಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಶೋಕ ಹೊಸಮನಿ, ಮುಂಡರಗಿ ತಾಲೂಕಾಧ್ಯಕ್ಷ ಸುಭಾಷ ಕಿತ್ತೂರ, ಗೌರವಾಧ್ಯಕ್ಷ ಉಮೇಶ ಹಿರೇಮಠ, ಕಾರ್ಯದರ್ಶಿ ಸಂತೋಷ ಹಡಪದ, ಬೀರಪ್ಪ ಮ್ಯಾಗೇರಿ, ಪರಶುರಾಮ ತಿಗರಿ, ಈರಣ ಕರಡಿಕೋಳ, ಮಂಜುನಾಥ ಕುರಿ, ಶಿವಕುಮಾರ ಉದಂಡಿ ಮುಂತಾದವರು ಅಭಿನಂದನೆ ಸಲ್ಲಿಸಿದ್ದಾರೆ.

## ಮಾ.13ರಂದು ಒಣಮೆಣಸಿನಕಾಯಿ ಟೆಂಡರ್ ಬಂದ್

■ವಿಜಯಸಾಕ್ಷಿ ಸುದ್ದಿ, ಗದಗ

ಈವರೆಗೆ ಮಾರಾಟವಾದ ಒಣಮೆಣಸಿನಕಾಯಿ ಮಾರುಕಟ್ಟೆಯಿಂದ ಹೊರಗಡೆ ಹೋಗಿರುವುದು ಮತ್ತು ದರದಲ್ಲಿ ಸ್ಥಿರತೆ ಇಲ್ಲದೇ ಇರುವುದರಿಂದ ಮಾ.13ರಂದು ಒಣಮೆಣಸಿನಕಾಯಿ ಟೆಂಡರ್ ಪ್ರಕ್ರಿಯೆ ಇರುವುದಿಲ್ಲ. ರೈತರಿಗೆ ಯಾವುದೇ ತರಹದ ತೊಂದರೆಯಾಗಬಾರದೆಂಬ ಕಾರಣದಿಂದದೀ ದಿನದಂದು ಮಾರುಕಟ್ಟೆ ಬಂದ್ ಇಡಲಾಗಿದೆ. ಮುಂದಿನ ವಾರ ಯಥಾಪ್ರಕಾರ ಟೆಂಡರ್ ಪ್ರಕ್ರಿಯೆ ಜರುಗುವುದು. ಕಾರಣ, ರೈತ ಬಾಂಧವರು ಸಹಕರಿಸಬೇಕೆಂದು ಗದಗನ ಒಣಮೆಣಸಿನಕಾಯಿ ದಲಾಲ-ವರ್ತಕರ ಸಂಘದ ಅಧ್ಯಕ್ಷ ಚಂದ್ರು ಬಾಳಿಹಳ್ಳಿಮಠ ಮತ್ತು ಕಾರ್ಯದರ್ಶಿ ಮುಂಡಲೀಕಪ್ಪ ಕಂಬಿಯವರು ವಿನಂತಿಸಿಕೊಂಡಿದ್ದಾರೆ.

'ಕಲಿಕಾ ಸಂಭ್ರಮ 2023-24' ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಬಿಇಒ ನಡುವಿನಮನಿ

# ಕಲಿಕಾಧಾರಿತ ಚಟುವಟಿಕೆಗಳು ಅರ್ಥಪೂರ್ಣ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳ ಕಲಿಕೆಯ ವಿಷಯಗಳನ್ನು ಆಧರಿಸಿ ಕೈಗೊಳ್ಳುವ ಚಟುವಟಿಕೆಗಳು ಅಥವಾ ಸ್ಪರ್ಧೆಗಳು ಮಕ್ಕಳ ಕಲಿಕೆಯನ್ನು ಗಟ್ಟಿಗೊಳಿಸುವುದರ ಮೂಲಕ ಅವರ ಶೈಕ್ಷಣಿಕ ಪ್ರಗತಿಗೆ ಪೂರಕವಾಗುತ್ತವೆ ಎಂದು ಗದಗ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಅಭಿಪ್ರಾಯಪಟ್ಟರು.

ಅವರು ಕೋಟುಮಚಗಿಯ ಸರಕಾರಿ ಹಿರಿಯ ಪ್ರಾಥಮಿಕ ಕನ್ನಡ ಗಂಡು ಮಕ್ಕಳ ಶಾಲೆಯಲ್ಲಿ ನಡೆದ ಬುನಾದಿ ಸಾಕ್ಷರತೆ ಹಾಗೂ ಸಂಖ್ಯಾಜ್ಞಾನ (ಎಫ್‌ಎಲ್‌ಎನ್) ಕಲಿಕಾಧಾರಿತ ಸ್ಪರ್ಧೆಗಳ 'ಕಲಿಕಾ ಸಂಭ್ರಮ 2023-24' ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಿಸಿ ಮಾತನಾಡಿದರು.

ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯ ಅನ್ವಯ ಮಕ್ಕಳ ಶೈಕ್ಷಣಿಕ ಪ್ರಗತಿಯ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಚಟುವಟಿಕೆಗಳಲ್ಲಿ ಆಯಾ ತರಗತಿಯ ಮಕ್ಕಳ ಸಾಮರ್ಥ್ಯಕ್ಕೆ ಅನುಗುಣವಾಗಿ ನಿಗದಿಪಡಿಸಿದ ಕಲಿಕಾಂಶಗಳ ಅಥವಾ ಕಲಿಕಾ ಫಲಗಳನ್ನು ಆಧರಿಸಿ ಹಮ್ಮಿಕೊಂಡಿರುವ ಈ ಕಲಿಕಾಧಾರಿತ ಚಟುವಟಿಕೆಗಳ ಕಾರ್ಯಕ್ರಮ ಬಹಳ ಅರ್ಥಪೂರ್ಣವಾಗಿದೆ. ಕ್ಲಸ್ಟರ್‌ನ ಎಲ್ಲ ಶಿಕ್ಷಕರ, ಎಸ್‌ಡಿಎಂಸಿ ಹಾಗೂ ಗ್ರಾಮ ಪಂಚಾಯಿತಿಯವರ ಸಹಕಾರದಿಂದ ಈ ಕಾರ್ಯಕ್ರಮ ಯಶಸ್ಸು ಕಂಡಿದ್ದು ಮುಂಬರುವ ದಿನಗಳಲ್ಲಿ ಎಲ್ಲ ಕ್ಲಸ್ಟರ್‌ಗಳಿಗೆ ಹಾಗೂ ತಾಲೂಕ ಹಂತದಲ್ಲಿ ಈ ಕಾರ್ಯಕ್ರಮ ವಿಸ್ತರಣೆ ಹೊಂದಬೇಕೆಂದು ಅಭಿಪ್ರಾಯಪಟ್ಟರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಸ್‌ಡಿಎಂಸಿ ಅಧ್ಯಕ್ಷ ಶೇಖಪ್ಪ ಬಂಡಿ ಮಾತನಾಡಿ, ಇಂತಹ ವಿಶಿಷ್ಟ ಕಾರ್ಯಕ್ರಮವನ್ನು ಆಯೋಜಿಸಿದ ಹಾಗೂ ಸಹಕಾರ ನೀಡಿದ ಸರ್ವರೂ ಅಭಿನಂದನಾರ್ಹರು ಎಂದರು.

ಎಸ್‌ಡಿಎಂಸಿ ಸದಸ್ಯ ಜಗದೀಶ್ ಮಲ್ಲಣ್ಣನವರ, ಗ್ರಾ.ಪಂ ಸದಸ್ಯ ರಮೇಶ್ ಅಕ್ಕಿ, ಶಿಕ್ಷಣ ಪ್ರೇಮಿ ಮಲ್ಲಣ್ಣ ಅಣ್ಣಿಗೇರಿ, ಶಿಕ್ಷಕರ ಸಂಘದ ಪದಾಧಿಕಾರಿಗಳು ಹಾಗೂ ಅಡವಿ ಸೋಮಾಪೂರ ಶಿಕ್ಷಕರ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಎಸ್.ಪಿ. ಕೊಪ್ಪದ, ಪ್ರತಿಭಾನ್ವಿತ ವಿದ್ಯಾರ್ಥಿನಿ ಅಪೂರ್ವ ಹೂಗಾರ ಮಾತನಾಡಿದರು.

> ಗದಗ ಡಯಟ್ ಹಿರಿಯ ಉಪನ್ಯಾಸಕ ಶಂಕರ್ ಹಡಗಲಿ ಮಾತನಾಡಿ, ಮಗು ಕಲಿತ ಕಲಿಕಾಂಶಗಳನ್ನು ಸಮುದಾಯದ ಮುಂದೆ ಹಾಗೂ ಪಾಲಕರ ಮಧ್ಯೆ ಅನಾವರಣಗೊಳಿಸುವುದರ ಜೊತೆಗೆ ಆ ಮಕ್ಕಳನ್ನು ಕಲಿಕೆಯ ಕಡೆಗೆ ಇನ್ನಷ್ಟು ಪ್ರೇರೇಪಿಸಿ ಸಮುದಾಯಕ್ಕೆ ಶಾಲೆಗಳು ಹತ್ತಿರವಾಗುವಂತೆ ಮಾಡುವ ಇಂತಹ ಚಟುವಟಿಕೆಗಳು ಪ್ರಶಂಸನೀಯ ಎಂದರು.

ಕೋಟುಮಚಗಿಯ ಸಮೂಹ ಸಂಪನ್ಮೂಲ ಕೇಂದ್ರದ ಸಮೂಹ ಸಂಪನ್ಮೂಲ ವ್ಯಕ್ತಿ ಡಿ.ಎಸ್. ಕಳಕಣ್ಣವರ ನೇತೃತ್ವದಲ್ಲಿ ಕ್ಲಸ್ಟರ್‌ನ ಎಲ್ಲಾ ಶಾಲೆಗಳ ಪ್ರಧಾನ ಗುರುಗಳು, ಶಿಕ್ಷಕರು ಎಸ್‌ಡಿಎಂಸಿ ಹಾಗೂ ಗ್ರಾಮ ಪಂಚಾಯಿತಿಯ ಸಹಕಾರದಲ್ಲಿ ಸುಮಾರು 45 ಸ್ಪರ್ಧೆಗಳನ್ನು ನಡೆಸಲಾಯಿತು.

ಕ್ಲಸ್ಟರ್ ಸಿಆರ್‌ಪಿ ಡಿ.ಎಸ್. ಕಳಕಣ್ಣವರ ಕಾರ್ಯಕ್ರಮದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಧಾನ ಗುರುಮಾತೆ ಎಸ್.ಜೆ. ಸಗರ ಸ್ವಾಗತಿಸಿದರು. ಬಿ.ಡಿ. ಬಡೇಖಾನವರ ಕಾರ್ಯಕ್ರಮ ನಿರೂಪಿಸಿದರು. ವಾಯ್.ಎಚ್. ನಿಡಗುಂದಿ ವಂದಿಸಿದರು.

## ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ವಿದ್ಯಾರ್ಥಿಗಳು ಹೆಚ್ಚಿನ ವಿದ್ಯಾಭ್ಯಾಸ ಮತ್ತು ಉದ್ಯೋಗ ಅರಸಿ ಬೇರೆ ಜಿಲ್ಲೆ, ಬೇರೆ ರಾಜ್ಯ, ವಿದೇಶಗಳಿಗೆ ಹೋಗಲು ಆಸಕ್ತಿ ಇದ್ದರೂ ಪಾಲಕರು ಅವರನ್ನು ಕಳಿಸಲು ಹಿಂದೇಟು ಹಾಕುತ್ತಿರುವುದು ವಿಷಾದನೀಯ ಸಂಗತಿಯಾಗಿದೆ ಎಂದು ಕೆಎಲ್‌ಇ ಆರ್ಟ್ಸ್ & ಕಾಮರ್ಸ್ ಕಾಲೇಜಿನ ಪ್ರಾಚಾರ್ಯೆ ಡಾ. ಎ.ಕೆ. ಮಠ ಹೇಳಿದರು.

ನಗರದ ಕೆ.ಎಲ್.ಇ. ಆರ್ಟ್ಸ್ & ಕಾಮರ್ಸ್ ಕಾಲೇಜ್‌ನಲ್ಲಿ ದೇಶಪಾಂಡೆ ಫೌಂಡೇಶನ್ ವತಿಯಿಂದ ಸ್ಕಿಲಿಂಗ್ ಅಂತರಂಗದ ಬಗ್ಗೆ ವಿದ್ಯಾರ್ಥಿಗಳು ಹಾಗೂ ಪಾಲಕರೊಂದಿಗೆ ಹಮ್ಮಿಕೊಂಡಿದ್ದ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹೆಣ್ಣು ಮಕ್ಕಳು ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಮುಂದೆ ಹೋಗಬೇಕಾದರೆ ಪಾಲಕರು ಅವರಿಗೆ ಬೆನ್ನೆಲುಬಾಗಿ ನಿಲ್ಲಬೇಕು. ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ. ಇಂದಿನ ಕಷ್ಟಕರ ಕಾಲದಲ್ಲಿ ಮಕ್ಕಳನ್ನು ಕೇವಲ ಅಂಕಗಳ ಆಧಾರದ ಮೇಲೆ ಗುರುತಿಸುವುದನ್ನು ಬಿಟ್ಟು ಅವರಲ್ಲಿರುವ ಪ್ರತಿಭೆಯನ್ನು ನೋಡಬೇಕಾಗಿದೆ ಎಂದರು.

ದೇಶಪಾಂಡೆ ಫೌಂಡೇಶನ್ ಗದಗ ಕ್ಲಸ್ಟರ್ ಮುಖ್ಯಸ್ಥರಾದ ರೆಹಮಾನ ಮಾತನಾಡಿ, ದೇಶಪಾಂಡೆ ಫೌಂಡೇಶನ್ ಆಯೋಜಿಸಿರುವ ಈ ಕಾರ್ಯಕ್ರಮದ ಸದುಪಯೋಗವನ್ನು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹಾಗೂ ಪಾಲಕರು ಹೆಚ್ಚು ಗಮನಕೊಟ್ಟು ತಮ್ಮ ಜೀವನದಲ್ಲಿ ಮುಂದೆ ಬರಬೇಕೆಂದು ನುಡಿದರು.

ತ ರ ಬೇ ತು ದಾ ರ ರಾ ದ ತೃಪ್ತಿ ಕೊಠಾರಿಯಾ ಸಂವಾದ ಕಾರ್ಯಕ್ರಮ ನಡೆಸಿಕೊಟ್ಟರು. ವಿನಾಯಕ, ಮಂಜುನಾಥ ಸೇರಿದಂತೆ ಕಾಲೇಜಿನ ವಿದ್ಯಾರ್ಥಿಗಳು, ಪಾಲಕರು, ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಶಿವರಾತ್ರಿಯ ವಿಶೇಷ ಪೂಜೆ, ಸಾಂಸ್ಕೃತಿಕ ವೈಭವ

# ಜೀವಾತ್ಮರಿಗೆ ಶಿವನಾಮವೇ ಶ್ರೀರಕ್ಷೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಧರ್ಮ, ಸಂಸ್ಕೃತಿ, ಸಂಪ್ರದಾಯ, ಹಬ್ಬ, ಆಚರಣೆಗಳ ಪ್ರತೀಕವಾದ ದೇವಸ್ಥಾನದಲ್ಲಿ ಪೂಜೆ, ಧ್ಯಾನ, ಸತ್ಸಂತ, ಸಾಂಸ್ಕೃತಿಕ ಆಚರಣೆಗಳು ಮೇಳೈಸಬೇಕು ಎಂದು ಹೂವಿನಶಿಗ್ಲಿ ಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ಲಕ್ಷ್ಮೇಶ್ವರದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಶಿವರಾತ್ರಿಯಂದು ನಡೆದ ವಿಶೇಷ ಪೂಜೆ, ಸಂಗೀತ, ನೃತ್ಯ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದ ಸಾನಿಧ್ಯ ವಹಿಸಿ ಶ್ರೀಗಳು ಆಶೀರ್ವಚನಗೈದರು.

ಸಕಲ ಜೀವಾತ್ಮರಿಗೆ ಶ್ರೀರಕ್ಷೆಯಾಗಿರುವ ಶಿವನಾಮ ಸ್ಮರಣೆ ಮಾಡಿದರೆ ಮಾನವರ ಪಾಪ ನಾಶವಾಗಿ ಪುಣ್ಯ ಲಭಿಸುತ್ತದೆ. ಶಿವಜ್ಞಾನದ ಅರಿವು ಜೀವನ ಸಾಕ್ಷಾತ್ಕಾರಕ್ಕೆ ಸೋಪಾನವಾಗಿದೆ. ನಿತ್ಯದ ಬದುಕಿನ ಜಂಜಾಟದ ನಡುವೆಯೂ ದೇವರು, ಧರ್ಮ, ಸತ್ಸಂಗ, ಶಿವ ಸ್ಮರಣೆ ಮಾಡುವುದರಿಂದ ಮನಸ್ಸಿಗೆ ಶಾಂತಿ ನೆಮ್ಮದಿ ಲಭಿಸುತ್ತದೆ. ಈ ಪರಂಪರೆ ಮುಂದುವರೆಯಲಿ ಎಂದರು.



ಕಾರ್ಯಕ್ರಮ ಉದ್ಘಾಟಿಸಿ ತಹಸೀಲ್ದಾರ ವಾಸುದೇವಸ್ವಾಮಿ ಮಾತನಾಡಿ, ದೇವಸ್ಥಾನಗಳಲ್ಲಿ ಸಂಗೀತ, ಸಾಹಿತ್ಯ, ಸಾಂಸ್ಕೃತಿಕ, ಕಲಾತ್ಮಕ ಕಾರ್ಯಕ್ರಮಗಳನ್ನು ಸಂಘಟಿಸುವುದರಿಂದ ನಮ್ಮ ಸಾಂಸ್ಕೃತಿಕ ಕ್ಷೇತ್ರವನ್ನು ಮತ್ತಷ್ಟು ಶ್ರೀಮಂತಗೊಳಿಸಲು ಸಾಧ್ಯವಾಗುತ್ತದೆ. ದೇವಸ್ಥಾನಗಳು ನಮ್ಮ ಧರ್ಮ, ಸಂಸ್ಕೃತಿ, ಸಂಪ್ರದಾಯ ಹಬ್ಬ, ಆಚರಣೆಗಳ ಪ್ರತೀಕವಾಗಿವೆ. ಇಂದಿನ ತಂತ್ರಜ್ಞಾನದ ಯುಗದಲ್ಲೂ ಇವುಗಳನ್ನು ಉಳಿಸಿ-ಬೆಳೆಸಬೇಕಾಗಿದೆ ಎಂದರು.

> ಕೃಷ್ಣ ಕ್ಷತ್ರಿಯ, ರಾಘವೇಂದ್ರ ಕ್ಷತ್ರಿಯ ಅವರಿಂದ ಕೊಳಲು ಹಾಗೂ ಶಹನಾಯಿ ಜುಗಲ್‌ಬಂದಿ, ಶಾರದಾ ಸಂಗೀತ ಗುರುಕುಲದ ಗಾಯತ್ರಿ ಕುಲಕರ್ಣಿ ಸಂಗಡಿಗರಿಂದ ಸಂಗೀತ ಸೇವೆ, ಹುಬ್ಬಳ್ಳಿಯ ಕು.ರಕ್ಷಾ ಜೋಶಿ ಮತ್ತು ಲಕ್ಷ್ಮೇಶ್ವರದ ಕಲಾ ವೈಭವ ಭರತನಾಟ್ಯ ಶಾಲೆಯ ಶಿಕ್ಷಕಿ ಭವ್ಯ ಕತ್ತಿ ಮತ್ತು ಹುಬ್ಬಳ್ಳಿಯ ಸಂಕಲ್ಪ ನೃತ್ಯ-ಸಾಂಸ್ಕೃತಿಕ ಸಂಸ್ಥೆ ಕಲಾ ಪ್ರತಿಭೆಗಳಿಂದ ಭರತನಾಟ್ಯ, ಜಾನಪದ ನೃತ್ಯ ವೈಭವ ಎಲ್ಲರ ಮನ ಸೆಳೆಯಿತು. ಶಾರದಾ ಸಂಗೀತ ಗುರುಕುಲ ವಿದ್ಯಾಪೀಠದ ಗಾಯತ್ರಿ ಕುಲಕರ್ಣಿ ಅವರಿಂದ ಶಾಸ್ತ್ರೀಯ ಮತ್ತು ಸುಗಮ ಸಂಗೀತ ಗೀತೆಗಳ ಮೂಲಕ ಶಿವನ ಸ್ಮರಣೆ ಮಾಡುತ್ತಾ ಜನರ ಮನಸೆಳೆದರು.

ಈ ವೇಳೆ ದೇವಸ್ಥಾನ ಭಕ್ತರ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ, ಜಾತ್ರಾ ಕಮಿಟಿ ಅಧ್ಯಕ್ಷ ಕುಬೇರಪ್ಪ ಮಹಾಂತಶೆಟ್ಟರ, ಅರ್ಚಕರ ಸಂಘದ ಅಧ್ಯಕ್ಷ ವಿ.ಎಲ್. ಪೂಜಾರ, ಚನ್ನಪ್ಪ ಜಗಲಿ, ಪಿಎಸ್ಐ ಈರಣ್ಣ ರಿತ್ತಿ ಮಾತನಾಡಿದರು. ಅರ್ಚಕರಾದ ಸೋಮನಾಥ ಪೂಜಾರ, ನಾಗರಾಜ ಪೂಜಾರ, ಚಿಕ್ಕರಸಯ್ಯ ಪೂಜಾರ, ಸಮೀರ ಪೂಜಾರ, ಪ್ರದೀಪ ಪೂಜಾರ, ಮುಂತಾದವರಿದ್ದರು.

ಮೆಹಬೂಬ ಸಂಗಡಿಗರಿಂದ ಭಕ್ತಿ ಗೀತೆಗಳು ಅಹೋರಾತ್ರಿ ನಡೆದವು. ಜಿ.ಎಸ್. ಗುಡಗೇರಿ, ದಿಗಂಬರ ಪೂಜಾರ, ಅರ್ಚಕ ರಾಘವೇಂದ್ರ ಪೂಜಾರ ನಿರ್ವಹಿಸಿದರು.

## ಸಮಸ್ಯೆ ನಿವಾರಣೆಗೆ ಸಂಘಟಿತ ಹೋರಾಟ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ


ಸಾಮಾಜಿಕ ನ್ಯಾಯ ಮತ್ತು ನಮ್ಮ ಮೂಲಭೂತ ಹಕ್ಕುಗಳನ್ನು ಪಡೆದುಕೊಳ್ಳಲು ಸ್ಲಂ ಸಮಿತಿಯಿಂದ ನಿರಂತರ ಹೋರಾಟಗಳನ್ನು ನಡೆಸಲಾಗುತ್ತಿದೆ. ಚುನಾವಣೆ ಸಂದರ್ಭದಲ್ಲಿ ಮಾತ್ರ ಭೇಟಿ ನೀಡುವ ಜನಪ್ರತಿನಿಧಿಗಳು ಚುನಾವಣೆ ನಂತರ ಸ್ಲಂ ಜನರ ಸಮಸ್ಯಗಳಿಗೆ ಸ್ಪಂದಿಸುತ್ತಿಲ್ಲ. ಆದ್ದರಿಂದ ಸ್ಲಂ ಜನರ ಸಮಸ್ಯೆಗಳನ್ನು ನುವಾರಿಸಲು ಸಂಘಟಿತ ಹೋರಾಟ ಅಗತ್ಯವಾಗಿದೆ ಎಂದು ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಂಚಾಲಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ತಿಳಿಸಿದರು.



ಅವರು ನಗರಸಭೆ ಉದ್ಯಾನವನದಲ್ಲಿ ಸ್ಲಂ ನಿವಾಸಿಗಳ ಹಾಗೂ ವಸತಿರಹಿತರ ಸಭೆಯನ್ನು ಉದ್ದೇಶಿಸಿ ಮಾತನಾಡಿ, ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ನೈಜ್ ಗುಡಿಸಲು ಪ್ರದೇಶಗಳಲ್ಲಿ ಅಭಿವೃದ್ಧಿ ಕಾಮಗಾರಿ ನಡೆಸದೇ ಇರುವುದರಿಂದ ಸ್ಲಂ ಪ್ರದೇಶಗಳು ಸೌಲಭ್ಯ ವಂಚಿತ ಪ್ರದೇಶಗಳಾಗಿವೆ. ನಮ್ಮ ಹಕ್ಕೊತ್ತಾಯಗಳಿಗೆ ಜನಪ್ರಧಿಗಳು ಮತ್ತು ಅಧಿಕಾರಿಗಳು ಸ್ಪಂದಿಸದೇ ಇದ್ದಲ್ಲಿ ಸ್ಲಂ ಸಮಿತಿಯಿಂದ ನಿರಂತರ ಹೋರಾಟ ನಡೆಸಲಾಗುವುದು ಎಂದರು.

ಸ್ಲಂ ಸಮಿತಿ ಪದಾಧಿಕಾರಿಗಳಾದ ರವಿಕುಮಾರ ಬೆಳಮಕರ, ಅಶೋಕ ಕುಸಬಿ, ಪರವೀನಬಾನು ಹವಾಲ್ದಾರ, ಮೆಹರುನಿಸಾ ಢಾಲಾಯತ, ಇಬ್ರಾಹಿಮ ಮುಲ್ಲಾ, ಶಿವಾನಂದ ಶಿಗ್ಲಿ, ಸಾಕ್ರುಬಾಯಿ ಗೋಸಾವಿ, ಮೆಹಬೂಬಸಾಬ ಬಳ್ಳಾರಿ, ಬಾಷಾಸಾಬ ಡಂಬಳ, ದಾದು ಗೋಸಾವಿ, ಖಾಜಾಸಾಬ ಇಸ್ಮಾಯಿಲನವರ, ಶಿವಪ್ಪ ಲಕ್ಕುಂಡಿ, ಸಲೀಮ ಬೈರಕದಾರ, ಚಂದ್ರಿಕಾ ರೋಣದ, ಅಫ್ರೋಜಾ ಹುಬ್ಬಳ್ಳಿ, ಶೊಸೀಲಮ್ಮ ಗೊಂದರ, ಫೈರುಜಾ ಹುಬ್ಬಳ್ಳಿ, ಮೆಹರುನಿಸಾ ಡಂಬಳ, ತಿಪ್ಪಮ್ಮ ಕೊರವರ, ಕೌಸರ ಬೈರಕದಾರ, ವಿಶಾಲಕ್ಷಿ ಹಿರೇಗೌಡ್ರ, ನಗೀನಾ ಯಲಗಾರ, ಪೀರಮ್ಮ ನದಾಫ, ಜೈತುನಬಿ ಶಿರಹಟ್ಟಿ, ಲಕ್ಷ್ಮೀ ಮಣಿವಡ್ಡರ, ಶೋಭಾ ಹಿರೇಮಠ, ಮಕ್ತುಮಸಾಬ ಮುಲ್ಲಾನವರ ಹಾಗೂ ಗದಗ-ಬೆಟಗೇರಿ ನಗರದ ವಿವಿಧ ಸ್ಲಂ ಪ್ರದೇಶದ ನೂರಾರು ಸ್ಲಂ ನಿವಾಸಿಗಳು ಮತ್ತು ವಸತಿರಹಿತರು ಸಭೆಯಲ್ಲಿ ಭಾಗವಹಿಸಿದ್ದರು.

## ವಿನಾಯಕ ಬಾಸ್ಮಿಗೆ ಪ್ರಶಸ್ತಿ




■ವಿಜಯಸಾಕ್ಷಿ ಸುದ್ದಿ, ಗದಗ

ನಿರ್ಮಲ ವಿವಿಧೋದ್ದೇಶಗಳ ಸೇವಾ ಸಂಸ್ಥೆ ಮುಂಡರಗಿ, ಗಮಕ ಕಲಾ ಪರಿಷತ್, ನವರಸ ಕಲಾ ಸಂಘ, ನಯನತಾರಾ ಕಲಾ ಸಂಘ ಇವರ ಸಂಯುಕ್ತ ಆಶ್ರಯದಲ್ಲಿ ಇತ್ತೀಚೆಗೆ ನಡೆದ ಡಾ. ಪರಮಪೂಜ್ಯ ಶ್ರೀ ಪುಟ್ಟರಾಜ ಗವಾಯಿಗಳ ಸ್ಮರಣೋತ್ಸವ ನಿಮಿತ್ಯ ಕಾವ್ಯ-ಕುಂಚ-ಗಾನ ನಮನ ಕಾರ್ಯಕ್ರಮವು ಸಿ.ಎಸ್. ಪಾಟೀಲ್ ಸಮೂಹ ಶಾಲೆಗಳ ಭವನದ ಮಾಡೆಲ್ ಹೈಸ್ಕೂಲ್‌ನಲ್ಲಿ ಜರಗಿತು.

ಸಮಾರಂಭದಲ್ಲಿ ಬೆಟಗೇರಿಯ ಎಸ್‌ಎಸ್‌ಕೆ ಶ್ರೀ ಜಗದಂಬಾ ಶಾಲೆಯ ವಿದ್ಯಾರ್ಥಿ ವಿನಾಯಕ ಬಾಸ್ಮಿ ಪರಮಪೂಜ್ಯ ಡಾ. ಪುಟ್ಟರಾಜ ಗವಾಯಿಗಳ ಭಾವಚಿತ್ರ ರಚಿಸಿ ಪ್ರಶಸ್ತಿ ಪಡೆದಿದ್ದಾನೆ. ಇವರಿಗೆ ತರಬೇತಿ ನೀಡಿದ ಡಾ. ಜಾಕೀರಹುಸೇನ್ ಕೊರ್ಲಹಳ್ಳಿ ಮತ್ತು ವಿದ್ಯಾರ್ಥಿಗೆ ಎಸ್‌ಎಸ್‌ಕೆ ಶ್ರೀ ಜಗದಂಬಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಲೋಕನಾಥ್ ಬಿ.ಕಬಾಡಿ, ಜಿ.ವಿ. ಬಸವಾ ಹಾಗೂ ವಾಯ್ಸ್ ಚೇರಮನ್ ದತ್ತು ಪವಾರ್ ಮತ್ತು ಕಮಿಟಿಯ ಸರ್ವ ಸದಸ್ಯರು ಹಾಗೂ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಸ್.ಡಿ. ಬೆನೆಕಲ್, ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಸಿ.ಎಸ್. ಹವಳದ, ದೈಹಿಕ ಶಿಕ್ಷಕರಾದ ರಾಘು ದೊಡ್ಡಮನಿ ಹಾಗೂ ಶಾಲೆಯ ಸಿಬ್ಬಂದಿ ವರ್ಗ, ಶಿಕ್ಷಕರು ಅಭಿನಂದಿಸಿದ್ದಾರೆ.

## ನಿಧನ ವಾರ್ತೆ

### ಶರಣಪ್ಪ ಮಡಿವಾಳಪ್ಪ ಕಿರೇಸೂರ



ರೋಣ, ಪಟ್ಟಣದ ಶರಣಪ್ಪ ಮಡಿವಾಳಪ್ಪ ಕಿರೇಸೂರ (73) ಭಾನುವಾರ ನಿಧನರಾದರು. ಮೃತರಿಗೆ ಪತ್ನಿ, ಇಬ್ಬರು ಹೆಣ್ಣು ಮಕ್ಕಳು ಇದ್ದಾರೆ. ಮೃತರ ಅಂತ್ಯಕ್ರಿಯೆ ಸೋಮವಾರ ಮಧ್ಯಾಹ್ನ 12 ಗಂಟೆಗೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

### ಶಿವಪುತ್ರ ಶಂಕರಪ್ಪ ನೇಸರಿಕರ್



ಗದಗ, ಸ್ಥಳೀಯ ಜಗದ್ಗುರು ತೋಂಟದಾರ್ಯ (ಜೆ.ಟಿ.) ಕಾಲೇಜು ಅಧ್ಯಾಪಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿ ಬೆಳಗಾವಿಯಲ್ಲಿ ವಾಸವಾಗಿದ್ದ ಶಿವಪುತ್ರ ಶಂಕರಪ್ಪ ನೇಸರಿಕರ್ (87) ಅವರು ಸೋಮವಾರ ನಿಧನರಾಗಿದ್ದಾರೆ.

ಮೃತರು ಪುತ್ರ, ಪುತ್ರಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಮಾ. 12 ರಂದು ಬೆಳಿಗ್ಗೆ 11 ಗಂಟೆಗೆ ಬೆಳಗಾವಿಯ ಸದಾಶಿವ ನಗರದ ರುದ್ರಭೂಮಿಯಲ್ಲಿ ನಡೆಯಲಿದೆ.

### ಲಿಂಗಮ್ಮ ಎಂ. ಕೆಂಚನಗೌಡ್ರ



ರೋಣ, ತಾಲೂಕಿನ ಹುಲ್ಲೂರು ಗ್ರಾಮದ ನಿವಾಸಿ, ಪಂಚಮಸಾಲಿ ಸಮಾಜದ ಹಿರಿಯರಾದ ಲಿಂಗಮ್ಮ ಎಂ.ಕೆಂಚನಗೌಡ್ರ (73) ಸೋಮವಾರ ನಿಧನರಾದರು. ಮೃತರು ಇಬ್ಬರು ಪುತ್ರರು, ಓರ್ವ ಪುತ್ರಿ, ಅಳಿಯಂದಿರು, ಸೊಸೆಯಂದಿರರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಮಂಗಳವಾರ ಬೆಳಿಗ್ಗೆ 11ಕ್ಕೆ ಹುಲ್ಲೂರಿನಲ್ಲಿ ಜರುಗಲಿದೆ.

## ಮಹಿಳೆಯರು ಶೋಷಣೆಯಿಂದ ಮುಕ್ತರಾಗಲಿ



■ವಿಜಯಸಾಕ್ಷಿ ಸುದ್ದಿ, ಕುಕನೂರು

ಮಹಿಳೆಯರು ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ ಹಾಗೂ ರಾಜಕೀಯ ಕ್ಷೇತ್ರಗಳಲ್ಲಿ ಶೋಷಣೆಗೆ ಒಳಗಾಗುವುದನ್ನು ನಾವು ನಿತ್ಯ ಪತ್ರಿಕೆಗಳಲ್ಲಿ ನೋಡುತ್ತಿದ್ದೇವೆ. ಮಹಿಳೆಯರು ತಮ್ಮ ಸಬಲೀಕರಣಕ್ಕಾಗಿ ವೈಚಾರಿಕ ಚಿಂತನೆಗಳನ್ನು ಹೊಂದುವುದರೊಂದಿಗೆ ಶೋಷಣೆಯಿಂದ ಮುಕ್ತಿ ಹೊಂದಬೇಕು ಎಂದು ಕುಲಪತಿ ಪ್ರೊ. ಬಿ.ಕೆ ರವಿ ಹೇಳಿದರು.

ಅವರು ಸೋಮವಾರ ಕೊಪ್ಪಳ ವಿಶ್ವವಿದ್ಯಾಲಯದ ಆವರಣದಲ್ಲಿ ಸಮಾಜಶಾಸ್ತ್ರ ಅಧ್ಯಯನ ವಿಭಾಗ ಆಯೋಜಿಸಿದ್ದ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿದರು.

ಮಹಿಳೆಯರು ದೈಹಿಕ ಮತ್ತು ಮಾನಸಿಕ ಸ್ವಾಸ್ಥ್ಯ ಗಳಿಸಕೊಳ್ಳುವುದರ ಮೂಲಕ ಸ್ವಾಭಿಮಾನದಿಂದ ಗೌರವದ ಬದುಕನ್ನು ಕಟ್ಟಿಕೊಳ್ಳಬೇಕು. ಶಿಕ್ಷಣ ಸ್ತ್ರೀಯರನ್ನು ಧೈರ್ಯವಂತರನ್ನಾಗಿ ಮಾಡುತ್ತದೆ. ಯಾರೂ ಅಧೈರ್ಯದಿಂದ ಇರದೆ ಗಟ್ಟಿ ನಿರ್ಧಾರಗಳಿಂದ ಗುರಿ ಮುಟ್ಟಬೇಕು ಎಂದು ತಿಳಿಸಿದರು.

ನಿರ್ದೇಶಕ ಮತ್ತು ವಾಣಿಜ್ಯಶಾಸ್ತ್ರದ ಪ್ರಾಧ್ಯಾಪಕ ಡಾ.ಚನ್ನಬಸವಪ್ಪ ಛಲವಾದಿ, ಕನ್ನಡ ವಿಭಾಗದ ಅತಿಥಿ ಉಪನ್ಯಾಸಕಿ ಡಾ. ಪಾರ್ವತಿ ಕನಕಗಿರಿ ಮಾತನಾಡಿದರು. ಶಿವಲೀಲಾ, ಐಶ್ವರ್ಯ ಪ್ರಾರ್ಥನೆ ಗೀತೆ ಹಾಡಿದರು. ನಿಂಗಜ್ಜ ಸ್ವಾಗತಿಸಿದರು. ಮಂಜುನಾಥ ನಿರೂಪಿಸಿದರು. ಸಮಾಜಶಾಸ್ತ್ರ ವಿಭಾಗದ ಅತಿಥಿ ಉಪನ್ಯಾಸಕ ಪಾಪಣ್ಣ ವಂದಿಸಿದರು.

ಕಾರ್ಯಕ್ರಮದಲ್ಲಿ ಕುಲಸಚಿವ ಪ್ರೊ. ಕೆ.ವಿ. ಪ್ರಸಾದ್ ಮತ್ತು ಕನ್ನಡ, ಸಮಾಜಶಾಸ್ತ್ರ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ ಹಾಗೂ ವಾಣಿಜ್ಯಶಾಸ್ತ್ರ ವಿಭಾಗದ ಉಪನ್ಯಾಸಕರು ಇದ್ದರು.

## ಮಾ. 14ರಂದು ನೇರ ಸಂದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಿಂದ ಮಾರ್ಚ್ 14 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ರೂಮ್ ನಂ. 215 ಜಿಲ್ಲಾಡಳಿತ ಭವನ ಗದಗ ಇಲ್ಲಿ ಶ್ರೀರಾಮ ಲೈಫ್ ಕಂಪನಿಯಲ್ಲಿ ಟೆಲಿಕಾಲರ್, ಸೇಲ್ಸ್ ಎಕ್ಸಿಕ್ಯೂಟಿವ್, ಡಾಟಾ ಕಲೆಕ್ಸನ್ ಮತ್ತು ಅನ್ನಪೂರ್ಣ ಫೈನಾನ್ಸ್ ಕಂಪನಿಯಲ್ಲಿ ಫೀಲ್ಡ್ ಕ್ರೆಡಿಟ್ ಆಫೀಸರ್, ಅಸಿಸ್ಟೆಂಟ್ ಬ್ರಾಂಚ್ ಮ್ಯಾನೇಜರ್ ಹುದ್ದೆಗೆ ನೇರ ಸಂದರ್ಶನ ಕರೆಯಲಾಗಿದೆ.

18 ರಿಂದ 30 ವರ್ಷದೊಳಗಿನ ಪಿಯುಸಿ ಮತ್ತು ಯಾವುದೇ ಪದವಿ ಪಡೆದ ಅಭ್ಯರ್ಥಿಗಳು ವಿದ್ಯಾರ್ಹತೆಯ ಅಂಕಪಟ್ಟಿ, ರೆಸ್ಯೂಮ್ ಮತ್ತು ಆಧಾರ್ ಕಾರ್ಡ್ ದ್ವಿಪ್ರತಿ ಝರಾಕ್ಸ್‌ಗಳೊಂದಿಗೆ ಭಾಗವಹಿಸಬಹುದಾಗಿದೆ. ಭಾಗವಹಿಸುವ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08372-220609, 6363330688 ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂತೆಗೆ ಹೋದ ಮಹಿಳೆ ಕಾಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನರೇಗಲ್ ಪೊಲೀಸ್ ಠಾಣೆಯಲ್ಲಿ ದಾಖಲಾದ ಗುನ್ನಾ ನಂ. 73/2022 ಕಲಂ: ಮಹಿಳೆ ಕಾಣೆ ನೇದ್ದರಲ್ಲಿ ಕಾಣಿಯಾದ ರೇಣುಕಾ ಕೋಂ ಈಶ್ವರಪ್ಪ ಚಲವಾದಿ ವಯಾ: 41 ವರ್ಷ ಜಾತಿ: ಹಿಂದೂ ಚಲವಾದಿ ಉದ್ಯೋಗ: ಕೂಲಿ ಕೆಲಸ ಸಾ: ನಿಡಗುಂದಿ ತಾ: ಗಜೇಂದ್ರಗಡ ಇವಳು ದಿ: 6/8/2022 ರಂದು ಮುಂಜಾನೆ 11-30 ಗಂಟೆ ಸುಮಾರಿಗೆ ನಿಡಗುಂದಿ ಗ್ರಾಮದ ತನ್ನ ತವರು ಮನೆಯಿಂದ ಗಜೇಂದ್ರಗಡಕ್ಕೆ ಸಂತೆಗೆ ಹೋಗುತ್ತೇನೆ ಎಂದು ಹೇಳಿ ಹೋದವಳು ಇಲ್ಲಿಯವರೆಗೆ ಮನೆಗೆ ಬಾರದೇ ಎಲ್ಲಿಯೋ ಹೋಗಿ ಕಾಣೆಯಾಗಿದ್ದು, ಈ ಬಗ್ಗೆ ನರೇಗಲ್ ಪೊಲೀಸ್ ಠಾಣೆಯಲ್ಲಿ 29-2-2024 ರಂದು ಪ್ರಕರಣ ದಾಖಲಾಗಿರುತ್ತದೆ. ಕಾಣೆಯಾದ ಮಹಿಳೆ ಬಗ್ಗೆ ಮಾಹಿತಿ ಸಿಕ್ಕಲ್ಲಿ ನರೇಗಲ್ ಪೊಲೀಸ್ ಠಾಣೆ ಮೊಬೈಲ್ ನಂ. 08381-268233/ 9480804454, ಸಿಪಿಐ ರೋಣ ಮೊಬೈಲ್ ನಂ. 9480804434 , ಗದಗ ಪೊಲೀಸ್ ಕಂಟ್ರೋಲ್ ರೂಂ. ಮೊಬೈಲ್ ನಂ. 9480804400 ನೇದ್ದಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಪೊಲೀಸ್ ಪ್ರಕಟಣೆ ತಿಳಿಸಿದೆ.

## ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯಶಸ್ವಿಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು



ಕರ್ನಾಟಕ ಸರ್ಕಾರ ಪ್ರತಿ ವರುಷ ಫಾಲ್ಗುಣ ಶುದ್ಧ ತ್ರಯೋದಶಿಯಂದು ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಆಚರಿಸಲು ನಿರ್ಧರಿಸಿದೆ. ಈ ವರ್ಷ ಮಾರ್ಚ್ 23ರಂದು ಸರ್ಕಾರ ತಾಲೂಕಾ ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಆಚರಿಸುವಂತೆ ಸೂಚಿಸಿರುವುದು ಸಂತೋಷದ ಸಂಗತಿ.

ರಾಜ್ಯ ಸರ್ಕಾರದಿಂದ ಆಚರಿಸಲ್ಪಡುವ ಸುಸಂದರ್ಭದಲ್ಲಿ ಆಯಾ ಭಾಗದ ವೀರಶೈವ ಲಿಂಗಾಯತ ಸಮುದಾಯ ಅಷ್ಟೇ ಅಲ್ಲ ಸರ್ವರೂ ಸಕ್ರಿಯವಾಗಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಶ್ರೀ ಪೀಠದಿಂದ ಕರೆ ನೀಡಿದ್ದಾರೆ.

ಶ್ರೀ ಜಗದ್ಗುರು ರೇಣುಕಾಚಾರ್ಯರು ಸಾಮಾನ್ಯರಲ್ಲ. ಜನ ಸಮುದಾಯದಲ್ಲಿ ಧಾರ್ಮಿಕ ಮತ್ತು ಸಾಮಾಜಿಕ ಸತ್ಕ್ರಾಂತಿಗೈದ ಪರಮಾಚಾರ್ಯರು. ಕೊಲನಪಾಕ ಸ್ವಯಂಭು ಶ್ರೀ ಸೋಮೇಶ್ವರ ಕ್ಷೇತ್ರದಲ್ಲಿ 18 ಜಾತಿ-ಜನಾಂಗಗಳ ಧಾರ್ಮಿಕ ಕೇಂದ್ರ ಹುಟ್ಟು ಹಾಕಿ ಸಂಸ್ಕಾರ ಸಂಸ್ಕೃತಿ ಅರುಹಿದವರು.

ಕಾಯಕ ಮತ್ತು ದಾಸೋಹ ಭಾವನೆ ಮೂಲಕ ಕ್ರಿಯಾತ್ಮಕ ಬದುಕಿಗೆ ಕರೆಕೊಟ್ಟವರು. ಮಹಾಮುನಿ ಅಗಸ್ತ್ಯರಿಗೆ ಶಿವಾದ್ವೈತ ಸಿದ್ಧಾಂತವನ್ನು ಬೋಧನೆಗೈದು ಅಸ್ಪ್ರಶ್ಯೋದ್ಧಾರಗಗೈದ ಕಾರಣ ಪುರುಷರು. ಜಾತಿಗಿಂತ ನೀತಿ, ತತ್ವಕ್ಕಿಂತ ಆಚರಣೆ, ಮಾತಿಗಿಂತ ಕೃತಿ, ಬೋಧನೆಗಿಂತ ಸಾಧನೆ, ದಾನಕ್ಕಿಂತ ದಾಸೋಹ, ಚರಿತ್ರೆಗಿಂತ ಚಾರಿತ್ರ್ಯ ಮಿಗಿಲೆಂದು ಸಾರಿದ ಪರಮಾಚಾರ್ಯರು. ಜಾತಿ, ಮತ, ಪಂಥಗಳ ಗಡಿ ಮೀರಿ ಮಾನವೀಯತೆಯ ಆದರ್ಶ ಮೌಲ್ಯಗಳನ್ನು ಎತ್ತಿ ಹಿಡಿದ ಕಾರುಣ್ಯಶೀಲರು ಶ್ರೀ ಜಗದ್ಗುರು ರೇಣುಕಾಚಾರ್ಯರು. ಅಂಥ ಮಹಿಮಾನ್ವಿತರ ಜಯಂತಿ ಆಚರಣೆಯಲ್ಲಿ ಸರ್ವರೂ ಪಾಲ್ಗೊಳ್ಳಬೇಕೆಂದು ರಂಭಾಪುರಿ ಶ್ರೀಗಳು ತಿಳಿಸಿದ್ದಾರೆ.

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 12ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 22ರಲ್ಲಿ ಅಂಬೇಡ್ಕರ್ ನಗರ, ತಾಜನಗರ, ಬನ್ನಿಮಹಾಕಾಳಿ, ಗಂಗಿಮಡಿ, ವಾರ್ಡ್ ನಂ. 19, 17, 18, 25ರಲ್ಲಿ ಭಾವಿಯವರ ಲೈನ್, ಮಣ್ಣಮ್ಮನವರ ಲೈನ್, ದುರಗಮ್ಮನ ಗುಡಿ ಭಾಗ-1,2, ನಮಾಜಿಯವರ ಲೈನ್, ಹಾವನೂರ ಲೈನ್, ಕಾಗದಗೇರಿ ಓಣಿ, ಹಳೇ ಲೈನ್, ಹೊಸ ಲೈನ್, ಭಟ್ಟರ ಲೈನ್, ಗಂಜಿಯವರ ಲೈನ್, ಮೀನದ ಮಾರ್ಕೆಟ್, ಬಳೆಗಾರ ಲೈನ್, ಚವ್ಹಾಣದ ಅವರ ಲೈನ್,

ವಾರ್ಡ್ ನಂ. 35ರಲ್ಲಿ ಆದರ್ಶನಗರ, ನೀಲಮ್ಮತಾಯಿವರ ಮಠ, ಗಡಗಿಯವರ ಲೈನ್, ಪತ್ತಾರ ಸರ್ ಲೈನ್, ಬಯಲು ಆಂಜನೇಯ ದೇವಸ್ಥಾನ ಲೈನ್, ದೇವರಾಜ್ ಹಾಸ್ಟೇಲ್, ವಾರ್ಡ್ ನಂ. 5 ರಲ್ಲಿ ನರಸಾಪೂರ ಆಶ್ರಯ ಕಾಲೋನಿ ಭಾಗಗಳು, ವಾರ್ಡ್ ನಂ. 32, 23ರಲ್ಲಿ ಮೇಹರವಾಡೆ ಲೈನ್, ಚನ್ನಪ್ಪನ ಲೈನ್, ಹಳೇ ಲೈನ್,ರಾಮದಾಸ ಲೈನ್, ಹುನಗುಂದ ಅವರ ಲೈನ್, ಭೂಮಾ ಅವರ ಲೈನ್, ಎಲಿಗಾರ ಪ್ಲಾಟ್ ಮುನವಳ್ಳಿಯವರ ಪ್ಲಾಟ್, ಅಕ್ಕಿಯವರ ಪ್ಲಾಟ್.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸಲು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಲಕ್ಷ್ಮೇಶ್ವರ ಪುರಸಭೆ: 82 ಲಕ್ಷ 32 ಸಾವಿರ ರೂ ಉಳಿತಾಯ ಬಜೆಟ್ ಮಂಡನೆ

## ಆದಾಯ ಕ್ರೋಢೀಕರಣದತ್ತ ಪುರಸಭೆ ಚಿತ್ತ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಪುರಸಭೆಯಲ್ಲಿ ಸೋಮವಾರ 2024-25ನೇ ಸಾಲಿನ ಬಜೆಟ್ ಮಂಡನೆಯ ಸಭೆ ನಡೆಯಿತು. ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಅ 82 ಲಕ್ಷ 32 ಸಾವಿರ ರೂಗಳ ಉಳಿತಾಯ ಬಜೆಟ್ ಮಂಡಿಸಿದರು. ಬಜೆಟ್‌ನಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಪುರಸಭೆ ನಿಧಿಯಿಂದ 72 ಲಕ್ಷ ರೂಗಳನ್ನು ಮೀಸಲಿರಿಸಿ, ನೀರಿನ ಸಮಸ್ಯೆಯಾಗದಂತೆ ಕ್ರಮ ತೆಗೆದುಕೊಳ್ಳುವ ವಿಶ್ವಾಸ ವ್ಯಕ್ತಪಡಿಸಿದರು.

ಬಜೆಟ್ ಗಾತ್ರ 24 ಕೋಟಿ 44 ಲಕ್ಷ ರೂ. ಆಗಿದ್ದು, ಅದರಲ್ಲಿ ಎಲ್ಲ ಅಯವ್ಯಯ ಮಂಡನೆಯಾಗಿ ಒಟ್ಟು ಅಂದಾಜಿಸಿರುವ 23 ಕೋಟಿ 61 ಲಕ್ಷ 71 ಸಾವಿರ ಪಾವತಿಗಳನ್ನು ಕಳೆದು 82 ಲಕ್ಷ 32 ಸಾವಿರ ರೂ ಉಳಿತಾಯ ಬಜೆಟ್ ಘೋಷಿಸಿದರು. 2024-25ನೇ ಸಾಲಿಗೆ ಪುರಸಭೆ ವ್ಯಾಪ್ತಿಯ ಆಸ್ತಿ ಕರ, ಮಳಿಗೆ ಬಾಡಿಗೆ, ನೀರಿನ ಕರ, ಇತರೆ ಮೂಲಗಳಿಂದ ಬರುವ ಫೀ ಇವುಗಳಿಂದ ಒಟ್ಟು 3 ಕೋಟಿ 70 ಲಕ್ಷ 58 ಸಾವಿರ ರೂ ಮತ್ತು ಎಸ್‌ಎಫ್‌ಸಿ ಮುಕ್ತ ನಿಧಿ 15ನೇ ಹಣಕಾಸು ಮತ್ತು ಇತರೆ ಅನುದಾನ ಮೂಲದಿಂದ 9 ಕೋಟಿ 71 ಲಕ್ಷ 39 ಸಾವಿರ ಇತರೆ ಅಸಾಮಾನ್ಯ ಖಾತೆಯಿಂದ 1 ಕೋಟಿ 28 ಲಕ್ಷ 54 ಸಾವಿರ ನಿರೀಕ್ಷಸಲಾಗಿದೆ. ಹೀಗೆ ಒಟ್ಟು 14 ಕೋಟಿ 70 ಲಕ್ಷ 48 ಸಾವಿರ ಆದಾಯಕ್ಕೆ ಆರಂಭಿಕ ಶಿಲ್ಕು 9 ಕೋಟಿ 73 ಲಕ್ಷ 55 ಸಾವಿರ ಸೇರಿ ಒಟ್ಟು 24.44 ಕೋಟಿ ರೂ ಗಾತ್ರದ ಬಜೆಟ್ ವಿವರಿಸಿದರು.

ಪುರಸಭೆ ನಿಧಿಯಿಂದ ಆಡಳಿತ, ಕಚೇರಿ ವೆಚ್ಚ, ನೀರು ಸರಬರಾಜು, ಬೀದಿ ದೀಪ, ವಿದ್ಯುತ್ ಬಿಲ್, ರಸ್ತೆ, ಚರಂಡಿ ಇತ್ಯಾದಿಗಳಿಗೆ ಒಟ್ಟು 9.71 ಕೋಟಿಗೂ ಅಧಿಕ ಹಣವನ್ನು ಮೀಸಲಾಗಿಡಲಾಗಿದೆ. ಸರಕಾರಕ್ಕೆ ಕಟ್ಟಬೇಕಾದ ಉಪಕರ ಮತ್ತು ತೆರಿಗೆ ಇತ್ಯಾದಿಗಳಿಗಾಗಿ 2.64 ಕೋಟಿಗೂ ಅಧಿಕ ಹಣವನ್ನು ಮೀಸಲಿಡಲಾಗಿದೆ. ಪುರಸಭೆ ನಿಧಿಯಲ್ಲಿ ಶೇ.24.10 ಪ.ಜಾ/ಪ.ಪಂ. ಕಲ್ಯಾಣಕ್ಕೆ 3.17 ಲಕ್ಷ, ಶೇ.7.25ರಲ್ಲಿ ಬಡಜನರ ಕಲ್ಯಾಣಕ್ಕಾಗಿ 96 ಸಾವಿರ, ಶೇ.5 ಅಂಗವಿಕಲರ ಕಲ್ಯಾಣಕ್ಕಾಗಿ 66 ಸಾವಿರ, ಕ್ರೀಡಾ ಚಟುವಟಿಕೆಗಳ ಪ್ರೋತ್ಸಾಹಕ್ಕೆ 13 ಸಾವಿರ, ಎಸ್‌ಎಫ್‌ಸಿ ಮುಕ್ತಿ ನಿಧಿಯಲ್ಲಿ ಶೇ.24.10 ಪ.ಜಾ/ಪ.ಪಂ ಕಲ್ಯಾಣಕ್ಕಾಗಿ 20 ಲಕ್ಷ ಹೀಗೆ ವಿವಿಧ ಕ್ಷೇತ್ರಗಳಿಗೆ ಸರಕಾರದ ನಿಯಮಗಳಂತೆ ಅನುದಾನವನ್ನು ಮೀಸಲಾಗಿಡಾಗಿದೆ ಎಂದು ಹೇಳಿದರು.

> ಪ್ರಸಕ್ತ ವಾರ್ಷಿಕ ಬಜೆಟ್‌ನಲ್ಲಿ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಯೋಜನೆ ರೂಪಿಸಲಾಗಿದೆ. ಜನಸಾಮಾನ್ಯರಿಗೆ ತೆರಿಗೆ ಭಾರ ಹೆಚ್ಚಿಸದೇ ಆದಾಯ ಕ್ರೋಢೀಕರಣದತ್ತ ಪುರಸಭೆ ಚಿತ್ತ ಹರಿಸಿದೆ. ಪಟ್ಟಣ ತೀವ್ರಗತಿಯಲ್ಲಿ ಬೆಳೆಯುತ್ತಿದ್ದು, ಕುಡಿಯುವ ನೀರು, ರಸ್ತೆ, ಸ್ವಚ್ಛತೆ ಸೇರಿ ಅಗತ್ಯ ಮೂಲಭೂತ ಸೌಲಭ್ಯ ಕಲ್ಪಿಸುವ ಜವಾಬ್ದಾರಿ ಹೆಚ್ಚಿದೆ. ಎಲ್ಲ ಸದಸ್ಯರು ಸರಕಾರದಿಂದ ಹೆಚ್ಚಿನ ಅನುದಾನ ತರುವ ಮತ್ತು ನಿರೀಕ್ಷಿತ ಮಟ್ಟದಲ್ಲಿ ಕಂದಾಯ ಕ್ರೋಢೀಕರಣಕ್ಕೆ ಸಹಕಾರ ನೀಡಬೇಕು. ಕುಡಿಯುವ ನೀರಿನ ಸಮಸ್ಯೆಯ ಶಾಶ್ವತ ಪರಿಹಾರಕ್ಕೆ 50 ಕೋಟಿ ರೂ ವೆಚ್ಚದ ಕ್ರಿಯಾಯೋಜನೆಯೊಂದಿಗೆ ಅನುದಾನ ತರುವ ಪ್ರಮಾಣಿಕ ಪ್ರಯತ್ನ ಮಾಡಲಾಗುತ್ತಿದೆ.
>
> **- ಮಹೇಶ ಹಡಪದ.**
> ಪುರಸಭೆ ಮುಖ್ಯಾಧಿಕಾರಿ.

ಈ ವೇಳೆ ಪುರಸಭೆ ಸದಸ್ಯರಾದ ಜಯಕ್ಕ ಕಳ್ಳಿ, ಬಸವರಾಜ ಓದುನವರ, ಫಿರ್ದೋಶ್ ಆಡೂರ, ರಾಮಣ್ಣ ಗಡದವರ, ಪೂರ್ಣಿಮಾ ಪಾಟೀಲ, ಜಯಕ್ಕ ಅಂದಲಗಿ, ಮಂಜವ್ವ ನಂದೆಣ್ಣವರ, ಮಂಜುಳಾ ಗುಂಜಳ, ಪೂಜಾ ಕರಾಟೆ, ಮುಸ್ತಾಕ್ ಶಿರಹಟ್ಟಿ, ಎಸ್.ಕೆ.ಹವಾಲ್ದಾರ, ಪ್ರವೀಣ ಬಾಳಿಕಾಯಿ, ಮಹಾದೇವಪ್ಪ ಅಣ್ಣಿಗೇರಿ, ಸಿಕಂದರ ಕಣಕೆ, ಕವಿತಾ ಶರಸೂರಿ, ವಾಣಿ ಹತ್ತಿ, ನೀಲವ್ವ ಮೆಣಸಿನಕಾಯಿ, ಸಮುದಾಯ ಸಂಘಟನಾ ಅಧಿಕಾರಿ ಶೋಭಾ ಬೆಳ್ಳಿಕೊಪ್ಪ, ವ್ಯವಸ್ಥಾಪಕಿ ಮಂಜುಳಾ ಹೂಗಾರ, ಶಿವಣ್ಣ ಮ್ಯಾಗೇರಿ, ಉಳ್ಳಟ್ಟಿ, ಶಿವಾನಂದ್ ಅಜ್ಜಣ್ಣವರ, ಮಂಜುನಾಥ ಮುದಗಲ್, ಮಹೇಶ ಹೊಸಮನಿ, ಹನುಮಂತ ನಂದೆಣ್ಣವರ ಸೇರಿ ಸಿಬ್ಬಂದಿಗಳಿದ್ದರು.

## ಚೆಕ್ ಡ್ಯಾಂ ಅನುದಾನ ರಾಜ್ಯ ಸರಕಾರದ್ದಲ್ಲ

■ವಿಜಯಸಾಕ್ಷಿ ಸುದ್ದಿ, ರೋಣ



ರಾಜ್ಯದಲ್ಲಿ ಲೋಕಸಭಾ ಚುನಾವಣೆಯ ಮತದಾನ ಮುಗಿಯುತ್ತಿದ್ದಂತೆ ಗ್ಯಾರಂಟಿ ಯೋಜನೆಗಳು ಸ್ಥಗಿತಗೊಳ್ಳಲಿದ್ದು, ಸರಕಾರ ಕೂಡ ಪತನವಾಗಲಿದೆ ಎಂದು ಶಾಸಕ ಸಿ.ಸಿ. ಪಾಟೀಲ ಹೇಳಿದರು.

ಅವರು ಸೋಮವಾರ ತಾಲೂಕಿನ ಬೆನಹಾಳ ಗ್ರಾಮದಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಅಟಲ್ ಭೂಜಲ್ ಯೋಜನೆಯಡಿಯಲ್ಲಿ 70 ಲಕ್ಷ ರೂಗಳ ವೆಚ್ಚದ ಚೆಕ್ ಡ್ಯಾಂ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಬೆನಹಾಳ ಗ್ರಾಮದ ಹಳ್ಳಕ್ಕೆ ಚೆಕ್ ಡ್ಯಾಂ ನಿರ್ಮಾಣ ಕಾಮಗಾರಿಗೆ ಕೇಂದ್ರ ಸರಕಾರ ಅನುದಾನ ನಿಡಿದ್ದು, ಈ ಅನುದಾನ ರಾಜ್ಯ ಸರಕಾರದ್ದಲ್ಲ. ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ರಾಜ್ಯ ಸರಕಾರದ ಖಜಾನೆ ಖಾಲಿಯಾಗಿದೆ. ಮತದಾರರು ಲೋಕಸಭಾ ಚುನಾವಣೆಯಲ್ಲಿ ಆಲೋಚಿಸಿ ಮತದಾನ ಮಾಡಬೇಕು. ಹಾವೇರಿ ಹಾಗೂ ಬಾಗಲಕೋಟಿ ಮತಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿಗಳ ಜಯ ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.

> ಸಿಎಂ, ಡಿಸಿಎಂ ಹಾಗೂ ನೀರಾವರಿ ಸಚಿವರು ಭ್ರಷ್ಟಾಚಾರದಲ್ಲಿ ಮುಳುಗಿದ್ದಾರೆ. ಮೊದಲಿನ ಸಿದ್ದರಾಮಯ್ಯ ಈಗಿಲ್ಲ. ಪಶು ಆಸ್ಪತ್ರೆ ನಿರ್ಮಿಸಲು ದಾನವಾಗಿ ಕೊಟ್ಟಿರುವ ಜಮೀನನ್ನು ಈಗಿನ ರಾಜ್ಯ ಸರಕಾರ ಅಲ್ಪಸಂಖ್ಯಾತರಿಗೆ ನೀಡುವ ಮೂಲಕ ಬಹು ದೊಡ್ಡ ಅನ್ಯಾಯವೆಸಗಿದೆ ಎಂದು ಶಾಸಕ ಸಿ.ಸಿ. ಪಾಟೀಲ ಆರೋಪಿಸಿದರು.

ಉಮೇಶಗೌಡ ಪಾಟೀಲ, ಮುತ್ತಣ್ಣ ಜಂಗಣ್ಣವರ, ಸುರೇಶ ಹುಡೇದ, ಬಾಬುಗೌಡ ಪಾಟೀಲ, ಬಸವಂತಪ್ಪ ತಳವಾರ, ಅಶೋಕ ಹೆಬ್ಬಳ್ಳಿ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

## 'ಅಮ್ಮ ಫೌಂಡೇಶನ್'ನಿಂದ ಉತ್ತಮ ಕಾರ್ಯಗಳಾಗಲಿ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ಅಮ್ಮ ಫೌಂಡೇಶನ್ ಉದ್ಘಾಟನೆ ಮತ್ತು ಪದಾಧಿಕಾರಿಗಳ ಪದಗ್ರಹಣ ಸಮಾರಂಭವು ಇಲ್ಲಿನ ಸೇವಾಲಾಲ ನಗರದ ರೋಟರಿ ಭವನದಲ್ಲಿ ನಡೆಯಿತು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಪೂಜ್ಯ ಶ್ರೀ ಸಿದ್ದರಾಮ ದೇವರು ಮಣಕವಾಡ ಆಶೀರ್ವಚನ ನೀಡಿ, ಅಮ್ಮ ಫೌಂಡೇಶನ್‌ನಿಂದ ಒಳ್ಳೆಯ ಕೆಲಸಗಳು ಆಗಲಿ. ಆ ಕೆಲಸಗಳ ಮೂಲಕ ಇನ್ನಷ್ಟು ಬೆಳೆಯಲಿ ಎಂದು ಆಶೀರ್ವದಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಕುರಿ ಮತ್ತು ಉಣ್ಣೆ ನಿಗಮದ ಮಾಜಿ ಅಧ್ಯಕ್ಷ ವಾಯ್.ಎನ್. ಗೌಡರ್, ಅಧ್ಯಕ್ಷತೆ ವಹಿಸಿದ್ದ ಸರಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ರವಿ ಗುಂಜಿಕರ್, ವಕೀಲರಾದ ರುದ್ರಗೌಡ ಪಾಟೀಲ, ಪ್ರಮುಖರಾದ ತಿಮ್ಮರೆಡ್ಡಿ ಮರಡ್ಡಿ, ಮೋಹನ್ ಗುತ್ತೆಮ್ಮನವರ, ಅಮ್ಮ ಫೌಂಡೇಶನ್ ಮಾರ್ಗದರ್ಶಕ ಡಾ. ಬಸವರಾಜ್ ಬಳ್ಳಾರಿ ಮುಂತಾದವರು ಮಾತನಾಡಿದರು.

ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ನಿರ್ದೇಶಕ ಎಚ್. ಎಮ್. ಶರೀಫನವರ್, ಪ್ರೇಮನಾಥ ಗರಗ, ರೋಟರಿ ಸಂಸ್ಥೆಯ ಅಧ್ಯಕ್ಷ ವಿಜಯ ಹಿರೇಮಠ, ಹುಚ್ಚಪ್ಪ ಸಂದಕದ, ಕೆ.ಎಫ್. ಹಳ್ಯಾಳ ಹಾಗೂ ಗ್ರಾಮಸ್ಥರು, ವಿದ್ಯಾರ್ಥಿಗಳು, ಮಹಿಳೆಯರು ಭಾಗವಹಿಸಿದ್ದರು.

ಫೌಂಡೇಶನ್‌ನ ನೂತನ ಅಧ್ಯಕ್ಷರಾಗಿ ವಕೀಲರಾದ ಮೈಲಾರಪ್ಪ ಡಿ.ಎಚ್, ಕಾರ್ಯದರ್ಶಿಯಾಗಿ ವಿಶ್ವನಾಥ ದಾಲಾಲಿ, ಖಜಾಂಚಿಯಾಗಿ ಮಾರುತಿ ಜಿ.ಎಚ್ ಪದಗ್ರಹಣ ಮಾಡಿದರು.

ಫೌಂಡೇಶನ್‌ನ ಪ್ರಧಾನ ಕಾರ್ಯದರ್ಶಿ ವಿಶ್ವನಾಥ ದಲಾಲಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಾಂಸ್ಕೃತಿಕ ಕಾರ್ಯದರ್ಶಿ ಪರಶುರಾಮ್ ತಳವಾರ್ ಸ್ವಾಗತಿಸಿದರು. ಬಾಹುಬಲಿ ಜೈನ್ ಕಾರ್ಯಕ್ರಮ ನಿರೂಪಿಸಿದರು.

## ಪ್ಲಂಬರ್ ಸಂಘದಿಂದ ರಕ್ತದಾನ

■ವಿಜಯಸಾಕ್ಷಿ ಸುದ್ದಿ, ಗದಗ



ವಿಶ್ವ ಪ್ಲಂಬರ್ ದಿನಾಚಾರಣೆಯ ಅಂಗವಾಗಿ ಗದಗ-ಬೆಟಗೇರಿ ಪ್ಲಂಬರ್ ಸಂಘದ ವತಿಯಿಂದ ರಕ್ತದಾನ ಶಿಬಿರವನ್ನು ರೋಟರಿ ಐ ಕೇರ್ ಸೆಂಟರ್‌ನಲ್ಲಿ ಏರ್ಪಡಿಸಲಾಗಿತ್ತು. ಪ್ಲಂಬರ್ ಸಂಘ ಗದಗ-ಬೆಟಗೇರಿ, ರೋಟರಿ ಸಂಸ್ಥೆ ಗದಗ-ಬೆಟಗೇರಿ, ರೋಟರಿ ಸಂಸ್ಥೆ ಗದಗ-ಬೆಟಗೇರಿ ಹಾಗೂ ವೆಲ್ ಫೇರ್ ಸೊಸೈಟಿ ಇವುಗಳ ಸಂಯುಕ್ತಾಶ್ರಯದಲ್ಲಿ ನಡೆದ ರಕ್ತದಾನ ಶಿಬಿರವನ್ನು ರೊ. ಶ್ರೀಧರ ಸುಲ್ತಾನಪೂರ ಉದ್ಘಾಟಿಸಿದರು.

ಮುಖ್ಯ ಅತಿಥಿಗಳಾದ ಡಾ. ಕಮಲಾಕ್ಷಿ ಅಂಗಡಿ ರಕ್ತದ ವರ್ಗೀಕರಣ, ಯಾವ ಸಂಧರ್ಭದಲ್ಲಿ ರಕ್ತದ ಅವಶ್ಯಕತೆ ಒದಗುತ್ತದೆ, ರಕ್ತದಾನ ಮಾಡುವುದರಿಂದ ದಾನಿಗಳಿಗೆ ಹೇಗೆ ಲಾಭಗಳಾಗುತ್ತದೆ ಎಂದು ವಿವರಿಸಿದರು. ಪ್ಲಂಬರ್ ಸಂಘದ ಅಧ್ಯಕ್ಷ ಕೆ.ಬಿ. ಕುಡಗುಂಟಿ ಸರ್ವರನ್ನು ಸ್ವಾಗತಿಸಿ ರಕ್ತದಾನ ಮಾಡುವಂತೆ ವಿನಂತಿಸಿದರು.

ರೋಟರಿ ಸಂಸ್ಥೆಯ ಕಾರ್ಯದರ್ಶಿ ವೀಣಾ ತಿರ್ಲಾಪೂರ ಕಾರ್ಯಕ್ರಮ ನಿರೂಪಿಸಿ ವಂದಿಸಿರು. ಬಸವೇಶ್ವರ ರಕ್ತ ಭಂಡಾರದ ವತಿಯಿಂದ ಸುಮಾರು 15 ಯುನಿಟ್ ರಕ್ತವನ್ನು ಸಂಗ್ರಹಿಸಲಾಯಿತು. ಸಂಘದ ಸಂಸ್ಥಾಪಕ ಅಧ್ಯಕ್ಷ ಝುಡ್.ಡಿ. ಬೇಲೇರಿ, ಅನಿಲ ಜಾದವ, ಗಣ್ಯ ವ್ಯಾಪಾರಸ್ಥರಾದ ವಿನೋದ ಪಟೇಲ, ಖಾಜೇಸಾಬ್ ಗಬ್ಬೂರ, ರೊ. ಬಾಲಕೃಷ್ಣ ಕಾಮತ್, ರೊ. ಶ್ರೀಧರಗೌಡ ಧರ್ಮಾಯತ ಮುಂತಾದವರು ಉಪಸ್ಥಿತರಿದ್ದರು.

## ಪ್ರೊ. ರೇಣುಕಾ ತಾಳಿ ಅವರಿಗೆ ಡಾಕ್ಟರೇಟ್

■ವಿಜಯಸಾಕ್ಷಿ ಸುದ್ದಿ, ಗದಗ



ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಇತ್ತೀಚೆಗೆ ನಡೆದ 23ನೇ ಘಟಿಕೋತ್ಸವದಲ್ಲಿ ಬೆಂಗಳೂರಿನ ಕಮ್ಮವಾರಿ ಸಂಘದ ಕೆ.ಎಸ್ ಸ್ಕೂಲ್ ಆಫ್ ಇಂಜಿನಿಯರಿಂಗ್ ಅಂಡ್ ಮ್ಯಾನೇಜಮೆಂಟ್‌ನ ಎಲೆಕ್ಟ್ರಾನಿಕ್ & ಕಮ್ಯೂನಿಕೇಶನ್ ವಿಭಾಗದಲ್ಲಿ ಅಸಿಸ್ಟಂಟ್ ಪ್ರೋಫೆಸರ್ ಆಗಿ ಕಾರ್ಯ ನಿರ್ವಹಿಸುತ್ತಿರುವ ರೇಣುಕಾ ವೀರಪ್ಪ ತಾಳಿ 'ಕ್ಲಾಸಿಫಿಕೇಶನ್ ಆಫ್ ವೈಟ್ ಬ್ಲಡ್ ಸೆಲ್ ಮೈಕ್ರೋಸ್ಕೋಪಿಕ್ ಬ್ಲಡ್ ಸ್ಮಿಯರ್ ಯೂಸಿಂಗ್ ಮಷಿನ್ ಲರ್ನಿಂಗ್ ಟೆಕ್ನಿಕ್' ಎಂಬ ವಿಷಯದ ಮೇಲೆ ಪ್ರಬಂಧ ಮಂಡಿಸಿ, ಡಾಕ್ಟರೇಟ್ ಪದವಿಯನ್ನು ಪಡೆದುಕೊಂಡಿದ್ದಾರೆ.

ಇವರಿಗೆ ಡಾ. ಬಿ. ಸುರೇಖಾ ಮಾರ್ಗ ದರ್ಶಕರಾಗಿದ್ದರು. ಪ್ರೊ. ರೇಣುಕಾ ತಾಳಿ ಇವರು ಕೆವಿಎಸ್‌ಆರ್ ಕಾಲೇಜಿನ ನಿವೃತ್ತ ಇಂಗಿಷ್ ಪ್ರಾಧ್ಯಾಪಕ ಪ್ರೊ. ವೀರಪ್ಪ ತಾಳಿ ಅವರ ಸುಪುತ್ರಿ. ರೇಣುಕಾ ತಾಳಿ ಅವರ ಸಹೋದ್ಯೋಗಿಗಳು ಹಾಗೂ ಬಂಧು-ಮಿತ್ರರು ಅಭಿನಂದನೆ ಸಲ್ಲಿಸಿದ್ದಾರೆ.

## ಇಂದು ಕೆ.ಎಚ್.ಪಾಟೀಲ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಮಹಿಳಾ) ನಾಮಕರಣದ ಉದ್ಘಾಟನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಗದಗ ಬೆಟಗೇರಿಯ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಿಂದ ಕೆ.ಎಚ್.ಪಾಟೀಲ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಮಹಿಳಾ) ನಾಮಕರಣದ ಉದ್ಘಾಟನಾ ಸಮಾರಂಭವು ಬೆಟಗೇರಿಯ ಕಣಗಿನಹಾಳ ರಸ್ತೆಯಲ್ಲಿ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಮಾರ್ಚ್ 12 ರಂದು ಬೆಳಿಗ್ಗೆ 9 ಗಂಟೆಗೆ ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಹಾಗೂ ವೈದ್ಯಕೀಯ ಶಿಕ್ಷಣ , ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ, ಭೂ ದಾನಿಗಳಾದ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಅಪರ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಉಮಾ ಮಹಾದೇವನ್, ವಾಣಿಜ್ಯ ತೆರಿಗೆ ಇಲಾಖೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಸಿ. ಶಿಖಾ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಆಯುಕ್ತರಾದ ಡಾ.ರಾಗಪ್ರಿಯ ಆರ್, ಜಿಲ್ಲಾಧಿಕಾರಿಗಳಾದ ವೈಶಾಲಿ.ಎಂ.ಎಲ್. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಬಿ.ಎಸ್. ನೇಮಗೌಡ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ನಿರ್ದೇಶಕರಾದ ಚಿದಾನಂದ, ಬೆಳಗಾವಿ ವಿಭಾಗೀಯ ಕಚೇರಿಯ ಜಂಟಿ ನಿರ್ದೇಶಕರಾದ ಬಸವಪ್ರಭು ಹಿರೇಮಠ, ಗದಗ ಬೇಟಗೇರಿ ಐ.ಎಂ.ಸಿ ಐಟಿಐ ಚೇರಮನ್ನರಾದ ಸತೀಶ್ ಕುಲಕರ್ಣಿ ಆಗಮಿಸುವರು.

ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು/ ಕಾರ್ಯದರ್ಶಿಗಳಾದ ಡಾ.ಮಲ್ಲೂರು ಬಸವರಾಜ್ ಸ್ವಾಗತ ಕೋರಿದ್ದಾರೆ.

## ಜೆಡಿಎಸ್ ಕಾರ್ಯಕರ್ತರ ಸೇರ್ಪಡೆ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಜಾತ್ಯತೀತ ಜನತಾದಳದ ಜಿಲ್ಲಾಧ್ಯಕ್ಷ ಎಂ.ವೈ. ಮುಧೋಳರ ಅಧ್ಯಕ್ಷತೆಯಲ್ಲಿ ಪಕ್ಷಕ್ಕೆ ಕಾರ್ಯಕರ್ತರ ಸೇರ್ಪಡೆ ಕಾರ್ಯಕ್ರಮ ಹಾಗೂ ಲೋಕಸಭಾ ಚುನಾವಣೆಯ ಬಗ್ಗೆ ಕಾರ್ಯಕರ್ತರಲ್ಲಿ ವಿಚಾರ ಹಾಗೂ ಮಾಹಿತಿ ಸಂಗ್ರಹಿಸುವ ಕಾರ್ಯಕ್ರಮ ರೋಣ ತಾಲೂಕಿನ ಅಸೂಟಿ ಗ್ರಾಮದಲ್ಲಿ ಮಾ. 12ರ ಬೆಳಿಗ್ಗೆ 10 ಗಂಟೆಗೆ ನಡೆಯಲಿದೆ.

ಜೆಡಿಎಸ್ ರಾಜ್ಯ ವಕ್ತಾರ ವಿ.ಆರ್. ಗೋವಿಂದಗೌಡ್ರ, ರಾಜ್ಯ ಎಸ್‌ಸಿ ಘಟಕದ ಸಂಘಟನಾ ಕಾರ್ಯದರ್ಶಿ ಪರಶುರಾಮ ಹಿರೇಮನಿ, ಜಿಲ್ಲಾ ಕಾರ್ಯಾಧ್ಯಕ್ಷ ಸಿ.ಎಸ್. ಪಾಟೀಲ, ಜಿಲ್ಲಾ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಜಿ.ಎ. ಬುರುಡಿ, ಪಕ್ಷದ ತಾಲೂಕು ಹಾಗೂ ಜಿಲ್ಲಾ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ.

ರೋಣ ತಾಲೂಕಿನ ಎಲ್ಲಾ ಕಾರ್ಯಕರ್ತರು, ಪದಾಧಿಕಾರಿಗಳು ಹಾಗೂ ಪಕ್ಷದ ಅಭಿಮಾನಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕೆಂದು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಜಿಅಲಿ ಕೊಪ್ಪಳ ಪ್ರತಿಕಾ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka